# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 234 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 04–04–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 234 | Title- Code: KARKAN 28269 | Chitradurga | Date: 04-04-2024 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಬಿಜೆಪಿ ಅಭ್ಯರ್ಥಿ ವಿರುದ್ಧ ದೂರು ದಾಖಲಿಸುವಂತೆ ಶಿವುಯಾದವ್ ಒತ್ತಾಯ 2

ಜಲಾಶಯ ಸಮೀಪವಿದ್ದೂ, ನೀರಿಗೆ ಹಾಹಾಕಾರ 3

ಪತ್ರ ಬರೆದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಇಂದು ಕಾರಜೋಳ ನಾಮಪತ್ರ ಸಲ್ಲಿಕೆ

▪ ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಭಾರತೀಯ ಜನತಾ ಪಾರ್ಟಿಯ ಅಭ್ಯರ್ಥಿ ಗೋವಿಂದ ಕಾರಜೋಳ ರವರು ಏ.4 ರಂದು ಲೋಕಸಭಾ ಕ್ಷೇತ್ರಕ್ಕೆ ನಾಮಪತ್ರವನ್ನು ಸಲ್ಲಿಸಲಿದ್ದಾರೆ. ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜು ಬೊಮ್ಮಾಯಿ,ಕೇಂದ್ರಸಚಿವ ಎ.ನಾರಾಯಣಸ್ವಾಮಿ, ಮಾಜಿ ಸಚಿವ ಶ್ರೀರಾಮುಲು, ಶಾಸಕ ಎಂ.ಚಂದ್ರಪ್ಪ, ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿ, ತಿಪ್ಪೇಸ್ವಾಮಿ, ಜಿಲ್ಲಾಧ್ಯಕ್ಷ ಎ.ಮುರಳಿ, ಮುಖಂಡರಾದ ಲಿಂಗಮೂರ್ತಿ, ಜೆಡಿಎಸ್‌ನ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಕಾಂತರಾಜ್, ಜಿಲ್ಲಾಧ್ಯಕ್ಷ ಎಂ.ಜಯ್ಯಣ್ಣ, ಮಾಜಿ ಅಧ್ಯಕ್ಷರಾದ ಯಶೋಧರ್, ತಿಮ್ಮರಾಯಪ್ಪ, ಅಂಜನಪ್ಪ, ಪ್ರಧಾನ ಕಾರ್ಯದರ್ಶಿ ಗೋಪಾಲಸ್ವಾಮಿ ನಾಯ್ಕ್, ಜಿ.ಬಿ.ಶೇಖರ್ ಸೇರಿದಂತೆ ಎರಡು ಪಕ್ಷಗಳ ಮುಖಂಡರುಗಳು ಭಾಗವಹಿಸಲಿದ್ದಾರೆ. ಬೆಳಿಗ್ಗೆ 12 ಗಂಟೆಗೆನಗರದನೀಲಕಂಠೇಶ್ವರದೇವಾಲಯದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಬೃಹತ್ ಮೆರವಣಿಗೆ ನಡೆಯಲಿದೆ. ಇದರಲ್ಲಿ ಎರಡು ಪಕ್ಷದ ಮುಖಂಡರು, ಕಾರ್ಯಕರ್ತರು ಭಾಗವಹಿಸುವುದರ ಮೂಲಕ ಕಾರ್ಯಕ್ರಮವನ್ನು ಯಶಸ್ವಿ ಮಾಡುವಂತೆ ಬಿಜೆಪಿ ಮತ್ತು ಜೆಡಿಎಸ್ ಮನವಿ ಮಾಡಿದೆ.

### ಏ.05ರಂದು ಡಾ.ಬಾಬು ಜಗಜೀವನರಾಂರವರ ದಿನಾಚರಣೆ

» ಚಿತ್ರದುರ್ಗ

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಇದೇ ಏಪ್ರಿಲ್ 05ರಂದು ಬೆಳಿಗ್ಗೆ 10ಕ್ಕೆ ಡಾ.ಬಾಬು ಜಗಜೀವನರಾಂ ಅವರ 117ನೇ ಜನ್ಮ ದಿನಾಚರಣೆ ಹಮ್ಮಿಕೊಳ್ಳಲಾಗಿದೆ. ಲೋಕಸಭಾ ಸಾರ್ವತ್ರಿಕ ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನಲೆಯಲ್ಲಿ ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಗುವುದು. ಜಯಂತಿಗೆ ಜಿಲ್ಲಾ ಮತ್ತು ತಾಲ್ಲೂಕುಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಸಮುದಾಯಗಳ ಮುಖಂಡರು, ಸಂಘಟನೆಗಳ ಪದಾಧಿಕಾರಿಗಳು, ಸಾರ್ವಜನಿಕರು ಹಾಜರಾಗಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.

### ಚೆಕ್‌ಪೋಸ್ಟ್‌ಗಳಲ್ಲಿ ವಾಹನ ತಪಾಸಣೆ



» ಚಿತ್ರದುರ್ಗ

ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಚೆಕ್‌ಪೋಸ್ಟ್‌ಗಳಿಗೆ ಚಿತ್ರದುರ್ಗ ತಹಶೀ ಲ್ದಾರ್ ಡಾ. ನಾಗವೇಣಿ ಭೇಟಿ ನೀಡಿ, ವಾಹನ ಗಳ ತಪಾಸಣೆ ನಡೆಸಿದರು. ಚಿತ್ರ ದುರ್ಗ ವಿಧಾನಸಭಾ ಕ್ಷೇತ್ರದ ವಡ್ಡರ ಪಾಳ್ಯ ಚೆಕ್‌ಪೋಸ್ಟ್, ತಿರುಮಲ ಡಾಬಾ ಚೆಕ್‌ಪೋಸ್ಟ್, ಕ್ಯಾದಿಗೆರೆ, ಕೆಳಗಳಹಟ್ಟಿ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಎಸ್‌ಎಸ್‌ಟಿ ತಂಡದ ರವಿಕುಮಾರ್, ಕಂದಾಯ ನಿರೀಕ್ಷಕ ಮೋಹನ್ ಕುಮಾರ್, ಗ್ರಾಮ ಆಡಳಿತಾಧಿಕಾರಿ ಮಮತಾ, ಚುನಾವಣಾ ವಿಷಯ ನಿರ್ವಾಹಕ ನವೀನ್ ಕುಮಾರ್ ಇದ್ದರು.

---

ನಿಮ್ಮ ಊರುಗಳಲ್ಲಿ ಅತ್ಯಧಿಕ ಲೀಡ್ ನೀಡಿ ಎಂದು ಶಾಸಕ, ಕರ್ನಾಟಕ ಸಣ್ಣ ಕೈಗಾರಿಕೆ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಕರೆ

# ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪ ಗೆಲುವು ಗ್ಯಾರೆಂಟಿ

» ಚಿತ್ರದುರ್ಗ

ಕಾಂಗ್ರೆಸ್ ಪಕ್ಷದ ಐದು ಗ್ಯಾರೆಂಟಿ ಯೋಜನೆಗಳನ್ನು ಪ್ರತಿ ಮನೆ ಮನೆಗೆ ಮುಟ್ಟಿಸುವ ಕೆಲಸವನ್ನು ಪ್ರತಿಯೊಬ್ಬ ಕಾರ್ಯಕರ್ತರು ಮಾಡುವ ಮೂಲಕ ಲೋಕಸಭೆ ಚುನಾವಣೆಯಲ್ಲಿ ನಿಮ್ಮ ಊರುಗಳಲ್ಲಿ ಅತ್ಯಧಿಕ ಲೀಡ್ ನೀಡಿ ಎಂದು ಶಾಸಕ ಮತ್ತು ಕರ್ನಾಟಕ ಸಣ್ಣ ಕೈಗಾರಿಕೆ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಕರೆ ನೀಡಿದರು.

ಇಂದು ಚಿತ್ರದುರ್ಗ ತಾಲೂಕಿನ ತುರುವನೂರು ಹೋಬಳಿಯ ಮುದ್ದಾಪುರ, ಚಿಕ್ಕಗೊಂಡನಹಳ್ಳಿ ,ಕೂನಬೇವು,ಮಾಡನಾಯಕನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮುಖಂಡರ ಕಾರ್ಯಕರ್ತರ ಭೇಟಿ ಮಾಡಿ ಮಾತನಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಆಡಳಿತ ನಡೆಸುತ್ತಿದ್ದು ಐದು ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಬಡವರ ಶ್ರಮಿಕರ ಪಕ್ಷವಾಗಿ ಹೊರಹೊಮ್ಮಿದೆ. ನಮ್ಮ ಪಕ್ಷ ನುಡಿದಂತೆ ನಡೆದಿದ್ದು ಇದನ್ನು ಜನರಿಗೆ ಮುಟ್ಟಿಸುವ ಕೆಲಸವನ್ನು ಪ್ರತಿಯೊಬ್ಬ ಕಾರ್ಯಕರ್ತರು ಮಾಡಬೇಕು. ನಿಮ್ಮ ಪ್ರತಿ ಹಳ್ಳಿಯಲ್ಲಿ ಲೀಡ್ ಕೊಡಲು ಇಂದಿನಿಂದ ಶ್ರಮಿಸಬೇಕು.ಲೀಡ್ ನೀಡಿದರೆ ನಿಮ್ಮ ಶಕ್ತಿ ಸಾಬೀತಾಗುತ್ತದೆ ಎಂದು ಕಾರ್ಯಕರ್ತರು ಮುಖಂಡರಿಗೆ



> ಕಾಂಗ್ರೆಸ್ ಪಕ್ಷದ ಗ್ಯಾರೆಂಟಿ ಯೋಜನೆಗಳು ನಮ್ಮ ಅಭ್ಯರ್ಥಿ ಗೆಲುವಿಗೆ ಸಹಕಾರಿಯಾಗಲಿದೆ. ಕಾಂಗ್ರೆಸ್ ಪಕ್ಷ ನುಡಿದಂತೆ ನಡೆಯುವ ಮೂಲಕ ಪ್ರತಿ ಮನೆ ಸೌಲಭ್ಯ ನೀಡುತ್ತಿದೆ. ಬಿಜೆಪಿ ಧೋರಣೆಯಿಂದ ಜನರು ಬೇಸತ್ತು ಕಾಂಗ್ರೆಸ್ ಪಕ್ಷಕ್ಕೆ ಆಶೀರ್ವಾದ ಮಾಡುತ್ತಾರೆ.
>
> » ಟಿ.ರಘುಮೂರ್ತಿ ಶಾಸಕರು ಚಳ್ಳಕೆರೆ ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ನಿಗಮ ಅಧ್ಯಕ್ಷ

ಉತ್ಸಾಹ ತುಂಬಿದರು.ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅವರು ಕಳೆದ ಬಾರಿ ಸೋಲು ಅನುಭವಿಸಿದರು ಸಹ ಜನರ ಜೊತೆಗಿದ್ದು ಕೆಲಸ ಮಾಡಿದ್ದಾರೆ. ನಮ್ಮದೇ ಸರ್ಕಾರ ರಾಜ್ಯದಲ್ಲಿ ಇದ್ದು ಅವರನ್ನು ಗೆಲ್ಲಿಸುವ ಮೂಲಕ ನಮ್ಮ ಸಮಸ್ಯೆಗಳನ್ನು ಕೇಂದ್ರ ಸರ್ಕಾರ ಮಟ್ಟದಲ್ಲಿ ಮಾತನಾಡಲು ಅನುಕೂಲವಾಗುತ್ತದೆ ಎಂದರು.

ಪುಟ 2



### ಶಾಸಕ ಟಿ.ರಘುಮೂರ್ತಿ ಅಭಿವೃದ್ಧಿ ಮೆಚ್ಚಿ ಇಬ್ಬರು ಗ್ರಾಪಂ ಸದಸ್ಯರು ಕಾಂಗ್ರೆಸ್ ಸೇರ್ಪಡೆ

» ನಮ್ಮ ಜನ ಸಮಾಚಾರ

ಚಳ್ಳಕೆರೆ: ಶಾಸಕ ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ ಅವರ ಅಧ್ಯಕ್ಷತೆಯಲ್ಲಿ ದೊಡ್ಡೇರಿ ಗ್ರಾಮದಲ್ಲಿ ನಡೆದ ಸಭೆಯಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ತಿಪ್ಪೇಸ್ವಾಮಿ, ಚಿತ್ತಲಿಂಗಪ್ಪ ಶಾಸಕತ ಕಾರ್ಯ ಮತ್ತು ಕಾಂಗ್ರೆಸ್ ಪಕ್ಷದ ತತ್ವ ಸಿದ್ಧಾಂತ ಮೆಚ್ಚಿ ಬಿಜೆಪಿ ಪಕ್ಷವನ್ನು ತೊರೆದು ಕಾಂಗ್ರೆಸ್ ಪಕ್ಷ ಸೇರ್ಪಡೆಯಾದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ವೆಂಕಟೇಶ್,ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ರವಿಕುಮಾರ್, ಸದಸ್ಯರುಗಳು, ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಚಳ್ಳಕೆರೆ ಕ್ಷೇತ್ರದಲ್ಲಿ ಎಲ್ಲಿಯೂ ನೀರಿನ ಸಮಸ್ಯೆ ಇಲ್ಲ

### ಅಭಾವ ಉಂಟಾದರೆ ಮುಂಜಾಗ್ರತಾ ಕ್ರಮಕ್ಕೆ ಸಿದ್ಧತೆ : ನೋಡಲ್ ಅಧಿಕಾರಿ ರಾಮಾಂಜನೇಯ

» ಚಳ್ಳಕೆರೆ

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಅಧಿಕಾರಿ ವರ್ಗ ಚುನಾವಣೆ ಕಾರ್ಯದಲ್ಲಿ ನಿರತವಾಗಿದ್ದರೂ ಸಹ ಸಾರ್ವಜನಿಕರ ಸಂಕಷ್ಟ, ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿ ನೇಮಿಸಿ ಅವರ ಮೂಲಕ ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದು, ವಿಶೇಷವಾಗಿ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರು ಸೇರಿದಂತೆ ಇನ್ನಿತರ ಸಮಸ್ಯೆಗಳ ಬಗ್ಗೆ ಮಾಹಿತಿ ನೀಡಿ, ಅವುಗಳಿಗೆ ಪರಿಹಾರ ಕಂಡುಕೊಳ್ಳುವಲ್ಲಿ ಎಲ್ಲರೂ ಸಹಕಾರ ನೀಡುವಂತೆ ತಾಲ್ಲೂಕು ನೋಡಲ್ ಅಧಿಕಾರಿ ರಾಮಾಂಜನೇಯ ಕೋರಿದರು.


ಅವರು, ಬುಧವಾರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲ್ಲೂಕು



ಮಟ್ಟದ ಅಧಿಕಾರಿಗಳಸಭೆ ಕರೆದು ಕುಡಿಯುವ ನೀರು, ಮೇವು, ಬರನಿರ್ವಹಣೆ ಮುಂತಾದ ಸಮಸ್ಯೆಗಳ ಬಗ್ಗೆ ಸಭೆಯಲ್ಲಿ ಹಾಜರಿದ್ದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಲೆಕ್ಕಿಗ, ಕಂದಾಯಾಧಿಕಾರಿಗಳಿಂದ ಮಾಹಿತಿ ಪಡೆದರು. ನಿರೀಕ್ಷೆಯಂತೆ ಈ ಬಾರಿಗೂ ಇನ್ನೂ ಮಳೆ ಆರಂಭವಾಗಿಲ್ಲ. ಆದರೆ, ಕುಡಿಯುವ ನೀರೂ ಸೇರಿದಂತೆ ಇನ್ನಿತರೆ ಸೌಲಭ್ಯಗಳಿಗೆ ಸಾರ್ವಜನಿಕರು ಸರ್ಕಾರದತ್ತ ಎದುರು ನೋಡುತ್ತಿದ್ದಾರೆ. ಜಾನುವಾರುಗಳು ಸಹ ಮೇವು, ನೀರಿಲ್ಲದ ಸಂಕಷ್ಟಕ್ಕೆ ಈಡಾಗಬಹುದಾದ ಪರಿಸ್ಥಿತಿ ಇದೆ. ಈ ಎಲ್ಲಾ ಹಿನ್ನೆಲೆಯಲ್ಲಿ ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿ ನೇಮಿಸಿ ಹಂತ, ಹಂತವಾಗಿ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಕಂಡುಗೊಳ್ಳುವಲ್ಲಿ ಎಲ್ಲರೂ ಸೇರಿದ್ದು, ಸಮಸ್ಯೆ ಉಲ್ಬಣವಾಗುವ ಮುಂಚೆ ಸಮಸ್ಯೆ ತಿಳಿಸಿದರೆ ಪರಿಹಾರ ನೀಡಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ಪುಟ 2

## ಡಾ.ಜಯಸಿಂಹ ಮನೆಗೆ ಗೋವಿಂದ ಕಾರಜೋಳ ಭೇಟಿ



» ಹೊಳಲ್ಕೆರೆ

ಚಿತ್ರದುರ್ಗ ಸಂಸತ್ ಚುನಾವಣಾ ಅಭ್ಯರ್ಥಿ ಗೋವಿಂದ ಕಾರಜೋಳ ಇವರು ಪಟ್ಟಣದಲ್ಲಿ ಬುಧವಾರ ವಿಧಾನ ಸಭಾ ಚುನಾವಣೆಯಲ್ಲಿ ಪರಾಜಿತ ಪಕ್ಷೇತರ ಅಭ್ಯರ್ಥಿ ಡಾ.ಜಯಸಿಂಹ ಇವರ ಮನೆಗೆ ಬೇಟಿ ನೀಡಿ ಬಿಜೆಪಿ ಪಕ್ಷವನ್ನು ಬೆಂಬಲಿಸುವಂತೆ ಮನವಿ ಮಾಡಿದರು. ಇದೆ ಸಮಯದಲ್ಲಿ ಪಕ್ಷದ ಸೇರುವ ಇಂಗಿತ ವ್ಯಕ್ತಪಡಿಸಿ ಕಾರಜೋಳ ಇವರಿಗೆ ಸನ್ಮಾನಿಸಿದರು.

## ಪ್ರಮುಖ ಸುದ್ದಿ

ಗೋವಿಂದ ಕಾರಜೊಳ ಪರ ಕೆಲಸ ಮಾಡುವೆ ಎಂದ ಚಂದ್ರಪ್ಪ, ಕೈ ಹಿಡಿದು ನಾವು ಅಣ್ಣ ತಮ್ಮಂದಿರು ಎಂದ ಕಾರಜೋಳ

# ಏನೋ ಮನಸ್ಸಿಗೆ ನೋವಾಗಿತ್ತು, ಸಿಟ್ಟಲ್ಲಿ ಹೇಳಿದ್ದೆ

» ಚಿತ್ರದುರ್ಗ

ಅಳಿಯ ಅಲ್ಲ ಮಗಳ ಗಂಡ , ಮೋದಿಗೆ ಪ್ರಚಾರ ಮಾಡಿದರು ಒಂದೇ ಕಾರಜೋಳಗೆ ಪ್ರಚಾರ ಮಾಡಿದರು ಒಂದೇ, ಏನೋ ಸಿಟ್ಟಿನಲ್ಲಿ ಹೇಳಿದ್ದೆ ,ಮನಸ್ಸಿಗೆ ನೋವಾಗಿತ್ತು ಎನ್ನುವ ಮೂಲಕ ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ ಪಕ್ಷದ ಪರವಾಗಿ ಕೆಲಸ ಮಾಡಲು ಗ್ರೀನ್ ಸಿಗ್ನಲ್ ನೀಡಿದ್ದಾರೆ.

ಇಂದು ಚಿತ್ರದುರ್ಗ ನಗರದ ತಮ್ಮ ನಿವಾಸದಲ್ಲಿ ಮಾಧ್ಯಮದವರ ಜೊತೆ ಮಾತನಾಡಿ ನಾನು ಬಿಜೆಪಿ ಪಕ್ಷದ ಕಟ್ಟಾಳು ಬಿಜೆಪಿ ಗೆಲುವಿಗೆ ದುಡಿಯುತ್ತೇನೆ ಎಂದಿದ್ದಾರೆ. ಪಕ್ಷದ ನಿರ್ಧಾರಕ್ಕೆ ಬದ್ದವಾಗಿದ್ದೇನೆ. ನನ್ನ ಮಗನಿಗೆ ಇನ್ನು ವಯಸ್ಸು ಇರುವುದರಿಂದ ನಾನು ಪಕ್ಷದ ಮಾತಿಗೆ ಒಪ್ಪಿಕೊಂಡಿದ್ದೇನೆ. ನಮಗೆ ಅನ್ಯಾಯವಾಗಿದೆ ಎಂದು ಸಿಟ್ಟಲ್ಲಿ ಮಾತನಾಡಿರುತ್ತೇವೆ. ನಾವು ಯಾರಿಗೂ ಅನ್ಯಾಯ ಮಾಡಿಲ್ಲ, 30 ವರ್ಷ ರಾಜಕಾರಣ ಮಾಡಿದ್ದೇವ ಎಂದು ತಿಳಿಸಿದರು.

ಚಂದ್ರಪ್ಪ ನಿವಾಸಕ್ಕೆ ಭೇಟಿ ನೀಡಿ ಮಾತನಾಡಿದ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ಮನುಷ್ಯ ಯಾವಗಲೂ ಆಶಾವಾದಿಯಾಗಿರಬೇಕು.





ರಘುಚಂದನ್ ಅವರು ಪಕ್ಷ ಸಂಘಟನೆ ಮತ್ತು ಹೋರಟ ಮಾಡಿಕೊಂಡು ಬಂದಿದ್ದಾರೆ. ಪಕ್ಷ ಯಾವುದೋ ಕಾರಣಕ್ಕಾಗಿ ಇದು ಒಂದು ಬಾರಿ ನೀವೇ ನಿಲ್ಲಬೇಕು ಎಂದ ಕಾರಣಕ್ಕೆ ಕೊನೆ ಕ್ಷಣದಲ್ಲಿ ಅಖಾಡಕ್ಕೆ ಬರಬೇಕಾಯಿತು. ನಾನು ಚಂದ್ರಣ್ಣ ಅಣ್ಣ ತಮ್ಮಂದಿರು ಇದ್ದಂತೆ. ಒಂದೇ ಕುಟುಂಬದವರು ವ್ಯತ್ಯಾಸ ಸಹಜ ಅದನ್ನು ಸರಿಪಡಿಸಿಕೊಂಡು ಹೋಗುತ್ತೇವೆ. ವರಿಷ್ಠರ ತಿರ್ಮಾನದಂತೆ ನಾನು ಬಂದಿದ್ದು ಎಲ್ಲಾರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

**ಬಿಜೆಪಿ ಪಕ್ಷದ ವಿರುದ್ಧ ಸಮರ ಸಾರಿದ್ದ ಚಂದ್ರಪ್ಪ ಬಿಎಸ್ವೈ ಮಾತಿಗೆ ಮಣಿದು ಫುಲ್ ಕೂಲ್:** ಕಳೆದ ಎರಡು ವಾರಗಳಿಂದಲೂ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿಯಲ್ಲಿ ಬೆಂಕಿ ಹೊತ್ತಿ ಉರಿದಿತ್ತು. ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ ಪುತ್ರ ರಘುಚಂದನ್ ಅವರಿಗೆ ಕೊನೆ ಘಳಿಗೆಯಲ್ಲಿ ಟಿಕೆಟ್ ನೀಡಿಲ್ಲ ಎಂದು ಬಿಜೆಪಿ ವಿರುದ್ಧ ಸಮರ ಸಾರಿದ್ದ ಚಂದ್ರಪ್ಪ ಕುಟುಂಬ ರಘುಚಂದನ್ ಅವರನ್ನು ಪಕ್ಷೇತರರಾಗಿ ಸ್ವರ್ಧೆ ಮಾಡಿಸಿ ಶಕ್ತಿ ಪ್ರದರ್ಶನಕ್ಕೆ ಸಿದ್ದವಾಗುವುದು ಅಷ್ಟೆ ಅಲ್ಲದೇ ಏಪ್ರಿಲ್ 3 ರಂದು ನಾಮಪತ್ರ ಸಲ್ಲಿಸಲಾಗುತ್ತದೆ ಎಂದು ಘೋಷಣೆ ಮಾಡಿದ್ದರು.

ರಾಜಕೀಯದಲ್ಲಿ ಏನು ಬೇಕಾದರೂ ಆಗಬಹುದು ಎಂಬ ಮಾತು ಮತ್ತೆ ನಿಜವಾಗಿದೆ. ಈ ಎಲ್ಲಾ ಬೆಳವಣಿಗೆ ಗಮನಿಸಿದ ರಾಜ್ಯ ಬಿಜೆಪಿ ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ಅವರನ್ನು ಸಂಧಾನಕ್ಕೆ ಕಳಿಸಿದರು. ಸಹ ವರ್ಕೌಟ್ ಆಗಿರಲಿಲ್ಲ.ಇದನ್ನು ಮನಗಂಡ ಮಾಜಿ ಸಿಎಂ ಯಡಿಯೂರಪ್ಪ ಶಾಸಕ ಚಂದ್ರಪ್ಪ ಮತ್ತು ಪುತ್ರ ರಘುಚಂದನ್ ಗೆ ಬುಲಾವ್ ಹೇಳಿ ಸಂಧಾನ ಮಾಡುವ ಮೂಲಕ ಭಿನ್ನಮತಕ್ಕೆ ಫುಲ್ ಸ್ಟಾಪ್ ಹಾಕಿ ಚಂದ್ರಪ್ಪಗೆ ಸಮಾಧಾನ ಮಾಡಿದ್ದು ಈಗ ಕೂಲ್ ಆಗಿರುವ ಚಂದ್ರಪ್ಪ ಮತ್ತು ರಘುಚಂದನ್ ಗೋವಿಂದ್ ಕಾರಜೋಳ ಪರ ಕೆಸಲ ಮಾಡುತ್ತೇನೆ ಎಂದು ತಿಳಿಸಿದ್ದು ಒಂದು ಹಂತಕ್ಕೆ ಗೋವಿಂದ ಕಾರಜೋಳ ನಿಟ್ಟುಸಿರು ಬಿಟ್ಟಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಮುರುಳಿ, ಯುವ ಮುಖಂಡ ಚಂದ್ರಪ್ಪ ಪುತ್ರ ರಘುಚಂದನ್ , ಸಿದ್ದೇಶ್ ಯಾದವ್ , ನಾಗರಾಜ್ ಬೇಂದ್ರೆ ಮತ್ತು ಮುಖಂಡರ ಭಾಗವಹಿಸಿದ್ದರು.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪ ಗೆಲುವು ಗ್ಯಾರೆಂಟಿ









» ಮೊದಲ ಪುಟದಿಂದ

ರಾಜ್ಯದಲ್ಲಿ ಬರಗಾಲ ಇದ್ದರು ಸಹ ನಾವು ಜನರನ್ನು ವಲಸೆ ಹೋಗದಂತೆ ನೋಡಿಕೊಂಡಿದ್ದೇವೆ.ಆದರೆ ಡಬಲ್ ಇಂಜಿನ್ ಎನ್ನುವ ಕೇಂದ್ರ ಸರ್ಕಾರ ರಾಜ್ಯಕ್ಕೆ ಮಲತಾಯಿ ಧೋರಣೆ ಮಾಡುತ್ತಿದ್ದು ಇಷ್ಟೊಂದು ಬರಗಾಲ ಇದ್ದರು ರಾಜ್ಯಕ್ಕೆ ಒಂದು ರೂಪಾಯಿ ಬಿಡುಗಡೆ ಮಾಡದೇ ಜನವಿರೋಧಿ ನೀತಿ ಅನುಸರಿಸುತ್ತಿದೆ.ರಾಜ್ಯದ ಬಿಜೆಪಿಗರು ಕೇಂದ್ರ ಸರ್ಕಾರಕ್ಕೆ ಏಕೆ ಪ್ರಶ್ನೆ ಮಾಡುತ್ತಿಲ್ಲ ಎಂದು ಬಿಜೆಪಿ ವಿರುದ್ಧ ಹರಿಹಾಯ್ದರು.ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಲು ನಾವೆಲ್ಲರೂ ಹಗಲಿರುಳು ಶ್ರಮಿಸೋಣ. ಈಗಾಗಲೇ ಗ್ರಾಮ ಪಂಚಾಯತಿ ಮಟ್ಟದಲ್ಲಿ ಮುಖಂಡರು ಮತ್ತು ಕಾರ್ಯಕರ್ತರ ಭೇಟಿ ಮಾಡಿದ್ದು ಉತ್ತಮ ಸ್ಪಂದನೆ ದೊರಕಿದೆ.ಈ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿ ಕೇಂದ್ರ ಸರ್ಕಾರ ರಚನೆಗೆ ಸಹಕಾರ ನೀಡಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಬಾಬುರೆಡ್ಡಿ, ಮುದ್ದಾಪುರ ಗ್ರಾ.ಪಂ. ಅಧ್ಯಕ್ಷೆ ಮಂಗಳಾ ಸಿದ್ದೇಶ್, ಉಪಾಧ್ಯಕ್ಷೆ ಸುಧಾರಾಣಿ, ಚಿಕ್ಕಗೊಂಡನಹಳ್ಳಿ ಗ್ರಾ.ಪಂ.ಅಧ್ಯಕ್ಷೆ ಮಾಂತಮ್ಮಾ ಎಕಾಂತಪ್ಪ, ಉಪಾಧ್ಯಕ್ಷ ಶ್ರೀ ಗಂಗಾಧರ,ಮಾಡನಾಯಕನಹಳ್ಳಿ ಗ್ರಾ.ಪಂ. ಅಧ್ಯಕ್ಷ ಅನಿಲ್ ಕುಮಾರ್,ಕೂನಬೇವು ಗ್ರಾ.ಪಂ. ಅಧ್ಯಕ್ಷೆ ಕವಿತಾ ನಾಗರಾಜ್, ಉಪಾಧ್ಯಕ್ಷೆ ಪೂಜಾರ್ ಮಂಜಣ್ಣ, ಗ್ರಾಮ ಪಂಚಾಯತಿ ಸದಸ್ಯರುಗಳಾದ ಮೈಲಾರಪ್ಪ, ಶೇಖರಪ್ಪ, ಲೋಕೇಶ್, ರವಿ, ವಾಜೀದ್, ಲಿಂಗಾರೆಡ್ಡಿ, ದೊರೆಸ್ವಾಮಿ, ಸಂತೋಷ, ನಾಗರಾಜ್, ಮುಖಂಡರುಗಳಾದ ರಾಜಪ್ಪ, ಸಿದ್ದೇಶ್, ಬಸವರಾಜ್, ತಿಪ್ಪೇಶ್, ನಿರಂಜನ್, ನಾಗೇಶ್, ಚಿತ್ರಲಿಂಗಪ್ಪ, ತಿಪ್ಪೇಸ್ವಾಮಿ, ರವಿ, ಅಜ್ಜಪ್ಪ, ಬಾಬು, ತಿಪ್ಪಣ್ಣ ಸೇರಿ ಕಾರ್ಯಕರ್ತರು ಭಾಗವಹಿಸಿದ್ದರು.

### ಚಳ್ಳಕೆರೆ ಕ್ಷೇತ್ರದಲ್ಲಿ ಎಲ್ಲಿಯೂ ನೀರಿನ ಸಮಸ್ಯೆ ಇಲ್ಲ

» ಮೊದಲ ಪುಟದಿಂದ

ಈಗಾಗಲೇ ಚುನಾವಣಾ ಆಯೋಗದ ನಿರ್ದೇಶನದಂತೆ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 260 ಮತಗಟ್ಟೆಗಳಿದ್ದು, ಎಲ್ಲಾ ಮತಗಟ್ಟೆಗಳಿಗೂ ಸೂಕ್ತ ಸೌಲಭ್ಯ ಕಲ್ಪಿಸುವ ಜೊತೆಗೆ ಪಿಡಿಒ, ವಿಎಗಳು ಈ ಕೆಲಸವನ್ನು ಸಹ ಪ್ರಾಮಾಣಿಕ ದಕ್ಷತೆಯಿಂದ ಮಾಡಬೇಕಿದೆ. ಯಾವುದಲ್ಲೂ ನಿರ್ಲಕ್ಷ್ಯ ಸಲ್ಲದು ಈಗಾಗಲೇ ವಿವಿಧ ಗ್ರಾಮ ಪಂಚಾಯಿತಿ ನೀಡಿದ ವರದಿಯಂತೆ ಈ ಕ್ಷೇತ್ರದಲ್ಲಿ ಸದ್ಯದ ಪರಿಸ್ಥಿತಿಯಲ್ಲಿ ಎಲ್ಲೂ ಕುಡಿಯುವ ನೀರಿನ ಸಮಸ್ಯೆ ಇಲ್ಲ, ಆದರೆ ಬಿಸಿಲಿನ ತಾಪಹೆಚ್ಚಾಗಿದ್ದು, ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಅಬಾವ ಉಂಟಾಗುವ ಸಂಭವವಿದೆ. ಮಳೆ ಬಾರದೆ ಇದ್ದಲ್ಲಿ ಸುಮಾರು 60 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉಂಟಾಗಬಹುದಾಗಿದೆ. ಈ ಹಿನ್ನೆಲೆಯಲ್ಲಿ ತಾಲ್ಲೂಕು ಆಡಳಿತ 8 ಕಡೆ ಖಾಸಗಿಯವರಿಂದ ನೀರು ಪಡೆಯಲು ನಿರ್ಧರಿಸಿದೆ. ಹೆಚ್ಚುವರಿಯಾಗಿ ಆಭಾವ ಉಂಟಾದಲ್ಲಿ ಇನ್ನೂ 3 ಕಡೆ ಖಾಸಗಿವರಿಂದಲೇ ನೀರು ಪಡೆಯಲು ಈಗಾಗಲೇ ತೀರ್ಮಾನಿಸಿದೆ. ಎಲ್ಲರೂ ಸಾರ್ವಜನಿಕರ ಸಮಸ್ಯೆ ನಿವಾರಣೆಗೆ ಮೊದಲ ಆದ್ಯತೆ ನೀಡಬೇಕು ಎಂದರು. ತಹಶೀಲ್ದಾರ್ ರೇಹಾನ್‌ಪಾಷ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಬಿ.ಎಸ್.ಲಕ್ಷ್ಮಣ್, ಎಇಇ ದಯಾನಂದ, ಬಿಸಿಎಂ ಅಧಿಕಾರಿ ನಾಗವೇಣಿ, ಎಸ್ಟಿ ಅಧಿಕಾರಿ ಶಿವರಾಜ್, ಬಿಇಒ ಕೆ.ಎಸ್.ಸುರೇಶ್, ಪಶು ಅಧಿಕಾರಿ ಡಾ.ರೇವಣ್ಣ ಮುಂತಾದವರು ಉಪಸ್ಥಿತರಿದ್ದರು.

### ಬಿಜೆಪಿ ಅಭ್ಯರ್ಥಿ ವಿರುದ್ಧ ದೂರು ದಾಖಲಿಸುವಂತೆ ಶಿವುಯಾದವ್ ಒತ್ತಾಯ

# ವೈರಲ್ ಆಯ್ತು ಬಿಜೆಪಿ ಹಣ ಹಂಚಿಕೆ ಹೇಳಿಕೆ

» **ಚಿತ್ರದುರ್ಗ**

ಈಬಾರಿಯಲೋಕಸಭಾಚುನಾವಣೆಯಲ್ಲಿ ಎದುರಾಳಿ ಅಭ್ಯರ್ಥಿಗಿಂತ ಹೆಚ್ಚು ಹಣ ಖರ್ಚು ಮಾಡಿ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳರವರನ್ನು ಗೆಲ್ಲಿಸಿಕೊಳ್ಳಬೇಕೆಂದು ಬಿಜೆಪಿ ಎಸ್ಟಿ ಮೋರ್ಚಾ ಅಧ್ಯಕ್ಷ ಬಹಿರಂಗ ಸಭೆಯಲ್ಲಿ ಹೇಳಿರುವುದು ವೀಡಿಯೋ ವೈರಲ್ ಆಗಿದೆ. ಚುನಾವಣಾ ಆಯೋಗ ಕ್ರಿಮಿನಲ್ ಕೇಸು ದಾಖಲಿಸಿ ಸಂಪೂರ್ಣ ತನಿಖೆ ನಡೆಸುವಂತೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿ ರಾಜ್ಯ ಸಂಚಾಲಕ ಸಿ.ಶಿವುಯಾದವ್ ಒತ್ತಾಯಿಸಿದರು.

ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದಲ್ಲಿ ಬಿಜೆಪಿ ಸಂವಿಧಾನ ಬಾಹಿರ ಕೆಲಸಕ್ಕೆ ಕೈಹಾಕಿದ್ದು, ವಾಮಮಾರ್ಗದಲ್ಲಿ ಅಧಿಕಾರ ಹಿಡಿಯಲು ಏನು ಬೇಕಾದರೂ ಮಾಡುತ್ತದೆ ಎನ್ನುವುದಕ್ಕೆ ಇದೊಂದು ಉದಾಹರಣೆ ಸಾಕು ಎಂದರು.



ಮೊಳಕಾಲ್ಮುರುವಿನಲ್ಲಿ ನಡೆದ ಸಭೆಯಲ್ಲಿ ಹಣ ಹಂಚಿಕೆ ಕುರಿತು ಚರ್ಚೆಯಾಗಿದ್ದರೂ ಚುನಾವಣಾ ಆಯೋಗ ಯಾವ ರೀತಿಯ ಕ್ರಮ ಕೈಗೊಳ್ಳದೆ ಸುಮ್ಮನಿದೆ. ಈ ಸಂಬಂಧ ಜೇರ್ಲಹಳ್ಳಿ ತಿಪ್ಪೇಸ್ವಾಮಿ ಹಾಗೂ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರ ಮೇಲೆ ಕ್ರಿಮಿನಲ್ ಕೇಸು ದಾಖಲಿಸಬೇಕು ಎಂದು ಆಗ್ರಹಿಸಿದರು.

ಪಾರದರ್ಶಕ ಹಾಗೂ ಮುಕ್ತವಾಗಿ ಚುನಾವಣೆ ನಡೆಯಬೇಕಾಗಿರುವುದರಿಂದ ಜಿಲ್ಲೆಯಾದ್ಯಂತ ಕಣ್ಗಾವಲು ಸಮಿತಿ ರಚಿಸಬೇಕು. ಹಣ ಮತ್ತು ಹೆಂಡ ಹಂಚಿ ಮತ ಕೊಂಡುಕೊಳ್ಳಲು ಹೊರಟಿರುವುದನ್ನು ತಡೆಯಬೇಕೆಂದು ಆಗ್ರಹಿಸಿದರು.

ಕ್ಷೇತ್ರದಲ್ಲಿ ಹಣ ಇಲ್ಲದಿದ್ದರೆ ನಡೆಯುವುದಿಲ್ಲವಿರೋಧಪಕ್ಷದವರು 500 ರೂ, ನೀಡಿದರೆ ನಾವು ಅದಕ್ಕಿಂತ ಹೆಚ್ಚಾಗಿ ನೀಡಬೇಕಿದೆ, ವಿರೋಧ ಪಕ್ಷದವರು ಏನು ನೀಡದಿದ್ದರೂ ಸಹಾ ನಾವುಗಳು 100 ರೂಗಳನ್ನಾದರೂ ನೀಡಬೇಕಿದೆ ಇದರ ಬಗ್ಗೆ ಅಜ್ಜರವರು ಮಾತನಾಡಿದ್ದಾರೆ ಎಂಬುದು ವಿಡಿಯೋದಲ್ಲಿದೆ. ಚುನಾವಣಾ ಆಯೋಗ ಸ್ವಯಂ ಪ್ರೇರಿತರಾಗಿ ಪ್ರಕರಣ ದಾಖಲಿಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಮುಂಖಡರಾದ ಸೈಯದ್ ವಲಿ ಖಾದ್ರಿ, ರವೀಶ್ ಭಾಗವಹಿಸಿದ್ದರು.

# ಲಕ್ಷ್ಮೀಕಾಂತ್ ಪಕ್ಷ ವಿರೋಧಿ ಚಟುವಟಿಕೆ

» **ಚಿತ್ರದುರ್ಗ**

ಬಿಜೆಪಿಯಲ್ಲಿರುವ ಲಕ್ಷ್ಮೀಕಾಂತ್ ಪಕ್ಷವನ್ನು ಬೆಳಸುವ ಕಾರ್ಯವನ್ನು ಮಾಡದೇ ಅದನ್ನು ಒಡೆಯುವ ಕಾರ್ಯವನ್ನು ಮಾಡುತ್ತಿದ್ದಾರೆ. ಇದ್ದಲ್ಲದೆ ನನ್ನ ಬಗ್ಗೆ ಸಾರ್ವಜನಿಕವಾಗಿ ಇಲ್ಲ ಸಲ್ಲದ ಮಾತುಗಳನ್ನು ಆಡುತ್ತಿದ್ದಾರೆ ಇದರ ಬಗ್ಗೆ ಪಕ್ಷದ ವರಿಷ್ಠರ ಗಮನಕ್ಕೆ ತರಲಾಗುವುದೆಂದು ಜಿಪಂ ಮಾಜಿ ಉಪಾಧ್ಯಕ್ಷ ದ್ಯಾಮಣ್ಣ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಯಾವುದೇ ಪಕ್ಷದಲ್ಲಿದ್ದರೂ ಸಹಾ ಅದಕ್ಕೆ ನಿಷ್ಠೆಯಾಗಿ ಕೆಲಸವನ್ನು ಮಾಡುತ್ತೇನೆ. ಅಲ್ಲದೆ ನನಗೆ ವಹಿಸಿದ ಜವಾಬ್ದಾರಿಯನ್ನು ಸಹಾ ಪ್ರಮಾಣಿಕವಾಗಿ ಮಾಡುತ್ತೇನೆ ಆದರೆ ಲಕ್ಷ್ಮೀಕಾಂತರವರು ಪಕ್ಷ ವಿರೋಧಿ ಚಟುವಟಿಕೆಯನ್ನು ಮಾಡುತ್ತಿದ್ದಾರೆ. ಹೊರಗಡೆಯಲ್ಲಿ ಬಿಜೆಪಿಯಾದರೆ ಒಳಗಡೆಯಲ್ಲಿ ಬೇರೆ ಪಕ್ಷದ ಪರವಾಗಿ ಕೆಲಸವನ್ನು ಮಾಡುತ್ತಿದ್ದಾರೆ ಎಂದು ದೂರಿದರು.

ಹಿರಿಯೂರಿನಲ್ಲಿ ಒಂದು ಗ್ರಾ.ಪಂ.ಯನ್ನು ಸಹಾ ಗೆಲ್ಲಲು ಅವರಿಂದ ಸಾಧ್ಯವಿಲ್ಲ. ಇಂತಹ ವ್ಯಕ್ತಿಯನ್ನು ಇಟ್ಟುಕೊಂಡ ವಿಧಾನಸಭಾ



ಚುನಾವಣೆಯನ್ನು ಮಾಡಲಾಗಿದೆ. ಒಬ್ಬ ಸಾಮಾನ್ಯ ಇಂಜಿನಿಯರ್ ಆಗಿದ್ದುಕೊಂಡು ಕೋಟ್ಯಾಂತರ ರೂ.ಗಳ ಅಸ್ತಿಯನ್ನು ಮಾಡಿದ್ದಾರೆ ಎಂದು ದೂರಿದರು.

ಲಕ್ಷ್ಮೀಕಾಂತ್ ಪಕ್ಷವನ್ನು ವ್ಯವಹಾರಿಕವಾಗಿ ನೋಡುತ್ತಿದ್ದಾರೆ. ಪಕ್ಷವನ್ನು ಕಟ್ಟುವ ಕೆಲಸವನ್ನು ಮಾಡದೇ ಅದನ್ನು ಒಡೆಯುವ ಕೆಲಸವನ್ನು ಮಾಡುತ್ತಿದ್ದಾರೆ. ಯಾವ ಚುನಾವಣೆಯನ್ನು ಗೆಲ್ಲಲ್ಲು ಸಾಧ್ಯವಿಲ್ಲ. ಈತ ಸದಾನಂದ ಗೌಡರವರು ಮುಖ್ಯಮಂತ್ರಿಯಾಗಿದ್ದಾಗ ಕಾಲನ್ನು ಹಿಡಿದು ಡಿಸಿಸಿ ಬ್ಯಾಂಕ್ ಅಧ್ಯಕ್ಷನಾಗಿದ್ದಾನೆ. ಜನತೆಯಲ್ಲಿ ಪಕ್ಷದ ಬಗ್ಗೆ ತಪ್ಪು ಅಭಿಪ್ರಾಯ ಬರುವಂತ ಕೆಲಸವನ್ನು ಮಾಡುತ್ತಿದ್ದಾರೆ. ಇದ್ದಲ್ಲದೆ ಸಾರ್ವಜನಿಕರ ಮಧ್ಯೆ ನನ್ನ ಬಗ್ಗೆ ಇಲ್ಲ ಸಲ್ಲದ ಮಾತುಗಳನ್ನು ಆಡುವುದರ ಮೂಲಕ ನನ್ನ ತೇಜೋವಧೆಯನ್ನು ಮಾಡುತ್ತಿದ್ದಾರೆ ನಾನು ಏನು ಎಂಬುದು ತಾಲ್ಲೂಕಿನ ಎಲ್ಲಾ ಜನತೆಗೆ ಗೊತ್ತಿದೆ. ಈತನಿಂದ ಕಲಿಯಬೇಕಿಲ್ಲ ಎಂದು ಹೇಳಿದರು. ಗೋಷ್ಠಿಯಲ್ಲಿ ಮಂಜುನಾಥ್, ಪ್ರಸನ್ನ ಹಾಜರಿದ್ದರು.

# ಜೆಡಿಎಸ್, ದಲಿತ ಸಂಘಟನೆಗಳ ಹಲವಾರು ಪ್ರಮುಖರು ಕಾಂಗ್ರೆಸ್‌ಗೆ



» **ಚಳ್ಳಕೆರೆ**

ಲೋಕಸಭಾಚುನಾವಣೆಹಿನ್ನೆಲೆಯಲ್ಲಿಕ್ಷೇತ್ರದವಿವಿಧದಲಿತಸಂಘಟನೆಗಳ ಮುಖಂಡರು ಶಾಸಕರು, ಕರ್ನಾಟಕ ರಾಜ್ಯ ಸಣ್ಣಕೈಗಾರಿಗಳ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿಯವರ ಜನಪರ ಯೋಜನೆ, ಕಾಳಜಿಯನ್ನು ಮೆಚ್ಚು ಜೆಡಿಎಸ್ ಹಾಗೂ ದಲಿತ ಸಂಘಟನೆಗಳ ಮುಖಂಡರು ಕಾಂಗ್ರೆಸ್ ಪಕ್ಷವನ್ನು ಸೇರ್ಪಡೆಯಾದರು.

ನಗರಸಭೆಯ ಮಾಜಿ ಉಪಾಧ್ಯಕ್ಷ, ದಲಿತ ಸಂಘಟನೆಯ ಯುವ ನಾಯಕ ಹಾಗೂ ಜೆಡಿಎಸ್ ಮುಖಂಡ, ಟಿ.ವಿಜಯಕುಮಾರ್ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿ, ಶಾಸಕ ಟಿ.ರಘುಮೂರ್ತಿಯವರು ಕಳೆದ 11 ವರ್ಷಗಳಿಂದ ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಪರಿಶ್ರಮವಹಿಸಿದ್ದಾರೆ. ಚಳ್ಳಕೆರೆ ವಿಧಾನಸಭಾ ಕ್ಷೇತ್ರವನ್ನು ಅಭಿವೃದ್ಧಿಪಥದತ್ತ ಮುನ್ನಡೆಸಿದ್ದಾರೆ. ರಾಜ್ಯದ 224 ಕ್ಷೇತ್ರಗಳಲ್ಲಿ ಅತಿವೇಗವಾಗಿ ಅಭಿವೃದ್ಧಿ ಹೊಂದಿದ ಕೆಲವೇ ಕ್ಷೇತ್ರಗಳಲ್ಲಿ ಚಳ್ಳಕೆರೆ ತಾಲ್ಲೂಕು ಒಂದಾಗಿದೆ. ಅವರು ಮತ್ತು ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಲು ಜೆಡಿಎಸ್ ತೊರೆದು ಕಾಂಗ್ರೆಸ್ ಪಕ್ಷ ಸೇರ್ಪಡೆಯಾಗಿರುವುದಾಗಿ ತಿಳಿಸಿದರು.

ಜೆಡಿಎಸ್ ಹಾಗೂ ದಲಿತ ಸಂಘಟನೆಗಳ ಮುಖಂಡರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದಕ್ಕೆ ಸಂತೋಷ ವ್ಯಕ್ತಪಡಿಸಿದ ಶಾಸಕ ಟಿ.ರಘುಮೂರ್ತಿ, ಕಳೆದ ಸುಮಾರು 10 ತಿಂಗಳಿನಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ರಾಜ್ಯದ ಜನತೆಗೆ ಐದು ಗ್ಯಾರಂಟಿಗಳ ಮೂಲಕ ಲಕ್ಷಾಂತರ ಬಡವರ ಬದುಕಿಗೆ ಆಸರೆಯಾಗಿದೆ. ಇದರಿಂದ ಎಲ್ಲೆಡೆ ಕಾಂಗ್ರೆಸ್ ಪಕ್ಷಕ್ಕೆ ಸೇರಿ ಬೆಂಬಲಿಸುವವರ ಸಂಖ್ಯೆ ಹೆಚ್ಚಾಗಿದೆ. ಪಕ್ಷಕ್ಕೆ ಸೇರ್ಪಡೆಯಾದ ಎಲ್ಲರನ್ನೂ ಸ್ವಾಗತಿಸುವುದಾಗಿ ತಿಳಿಸಿದರು.

ಜೆಡಿಎಸ್ ಮುಖಂಡ ನನ್ನಿವಾಳ ನಾಗರಾಜ, ಟಿ.ಮಹಂತೇಶ್, ಡಿಎಸ್‌ಎಸ್ ಮುಖಂಡ ಹೊನ್ನೂರಸ್ವಾಮಿ, ಅಂಬೇಡ್ಕರ್ ಸ್ವಾಭಿಮಾನಿಸೇನೆ ತಾಲ್ಲೂಕು ಅಧ್ಯಕ್ಷ ಟಿ.ವಿನೋದ್‌ಕುಮಾರ್, ಗಾಂಧಿನಗರದ ಡಿ.ತಿಪ್ಪೇಸ್ವಾಮಿ, ಶ್ರೀಧರ, ಪಾಂಡುಬಿಳಿಗಿರಿ, ನಗರಂಗೆರೆ ತಿಪ್ಪೇಶ್ ಮುಂತಾದವರು ಕಾಂಗ್ರೆಸ್ ಸೇರ್ಪಡೆಯಾದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಬಿ.ಪಿ.ಪ್ರಕಾಶ್‌ಮೂರ್ತಿ, ಟಿ.ರವಿಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ನಗರಸಭಾ ಸದಸ್ಯ ರಮೇಶ್‌ಗೌಡ, ಮುಖಂಡರಾದ ಟಿ.ಗಿರಿಯಪ್ಪ, ಶೇಖರಪ್ಪ, ಗದ್ದಿಗೆತಿಪ್ಪೇಸ್ವಾಮಿ, ಚೌಳೂರುಪ್ರಕಾಶ್, ತಿಪ್ಪೇಸ್ವಾಮಿ, ಮೈಲಾರಪ್ಪ, ರಾಜಮ್ಮ, ರವಿ, ಬಾಬು, ರಂಗಸ್ವಾಮಿ, ಹೊಟ್ಟೆಪ್ಪನಹಳ್ಳಿ ಷಣ್ಮುಖಿ, ಎಂ.ಹಿದಾಯಿತ್‌ವುಲ್ಲಾ, ಮೈನಾಬಾಬು, ತಿಪ್ಪೇಸ್ವಾಮಿ, ಕುಮಾರಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

# ಲೋಕಸಭಾ ಚುನಾವಣೆ: ಚುನಾವಣಾ ಡಿಜಿಟಲ್ ಜಾಹಿರಾತಿಗೆ ಎಂಸಿಎಂಸಿ ಅನುಮತಿ ಕಡ್ಡಾಯ; ಡಿಸಿ

» **ದಾವಣಗೆರೆ**



ಲೋಕಸಭಾ ಚುನಾವಣೆ ನಡೆಯುತ್ತಿದ್ದು ಯಾವುದೇ ರಾಜಕೀಯ ಪಕ್ಷ, ಅಭ್ಯರ್ಥಿಗಳು ವಿದ್ಯುನ್ಮಾನ ಮಾಧ್ಯಮ, ಡಿಜಿಟಲ್ ಪ್ಲಾರ್ಟ್ ಫಾರಂನಲ್ಲಿ ಜಾಹಿರಾತು ನೀಡಲು ಜಿಲ್ಲಾ ಎಂ.ಸಿ.ಎಂ.ಸಿ ಸಮಿತಿ ಅನುಮೋದನೆ ಕಡ್ಡಾಯವಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ. ಎಂ.ಸಿ.ಎಂ.ಸಿ ಸಮಿತಿ; ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅಧ್ಯಕ್ಷರಾಗಿರುವರು. ಅಪರ ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ ನೋಡಲ್ ಅಧಿಕಾರಿ, ಸ್ಮಾರ್ಟ್ ಸಿಟಿ ಯೋಜನೆ ಮುಖ್ಯ ಲೆಕ್ಕಾಧಿಕಾರಿ ಗಿರೀಶ್. ಹೆಚ್, ಯು.ಬಿ.ಡಿ.ಟಿ ಕಾಲೇಜಿನ ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥರಾದ ಕೆ.ಎಸ್.ಶ್ರೀಧರ್ ಸದಸ್ಯರಾಗಿದ್ದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರಾದ ಧನಂಜಯ.ಬಿ ಇವರು ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ.

ಸಮಿತಿ ಕರ್ತವ್ಯಗಳು ಹಾಗೂ ಜವಾಬ್ದಾರಿಗಳು; ರಾಜಕೀಯ ಪಕ್ಷ, ಅಭ್ಯರ್ಥಿಗಳ ರಾಜಕೀಯ ಜಾಹಿರಾತುಗಳನ್ನು ಪ್ರಸಾರ ಪೂರ್ವದಲ್ಲಿ ದೃಢೀಕರಣ ನೀಡುವುದು, ಕಾಸಿಗಾಗಿ ಸುದ್ದಿಯ ಮೇಲ್ವಿಚಾರಣೆ ಹಾಗೂ ತಡೆಯಲು ಕ್ರಮಗಳನ್ನು ಜರುಗಿಸುವುದು. ಮಾಧ್ಯಮದಲ್ಲಿ ಪ್ರಸಾರವಾಗುವ ಸುಳ್ಳು ಸುದ್ದಿ, ದ್ವೇಷ ಭಾಷಣದ ಮೇಲೆ ನಿಗಾವಹಿಸಿ ವರದಿ ಸಂಗ್ರಹಿಸುವುದು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ರಾಜಕೀಯ ಜಾಹಿರಾತು ಸೇರಿದಂತೆ ಪೋಸ್ಟ್‌ಗಳ ಮೇಲೆ ಮೇಲ್ವಿಚಾರಣೆ ಮಾಡುವ ಕೆಲಸವನ್ನು ಸಮಿತಿ ಮಾಡಲಿದೆ.

ಚುನಾವಣಾ ನೀತಿ ಸಂಹಿತೆ ಇರುವುದರಿಂದ ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ವಿದ್ಯುನ್ಮಾನ ಮಾಧ್ಯಮಗಳಾದ ಟಿ.ವಿ, ಕೇಬಲ್ ಟಿವಿ, ಆಕಾಶವಾಣಿ, ಎಫ್.ಎಂ, ಇ-ನ್ಯೂಸ್ ಪೇಪರ್, ರೇಡಿಯೋ, ವಾಯ್ಸ್ ಎಸ್‌ಎಂಎಸ್, ಬಲ್ಕ್ ಎಸ್.ಎಂ.ಎಸ್, ಸಿನಿಮಾ ಹಾಲ್, ಡಿಜಿಟಲ್ ಡಿಸ್ಪ್ಲೇ, ಯುಟ್ಯೂಬ್, ವೆಬ್‌ಸೈಟ್, ಸಾಮಾಜಿಕ ಜಾಲತಾಣ ವೆಬ್‌ಸೈಟ್‌ನಲ್ಲಿ ಜಾಹಿರಾತು ನೀಡಲು ಎಂ.ಸಿ.ಎಂ.ಸಿ.ಯಿಂದ ನೀಡುತ್ತಿರುವ ಜಾಹಿರಾತಿಗೆ ಪ್ರಸಾರಕ್ಕೂ ಮುನ್ನ ಪೂರ್ವಾನುಮತಿ ಪಡೆಯಬೇಕು. ಅನುಮತಿಗಾಗಿ ಅನುಬಂಧ-ಎ ರಡಿ ಅನುಮತಿ ಪಡೆದುಕೊಳ್ಳಬೇಕು.

## ಪ್ರಮುಖ ಸುದ್ದಿ

### ಏ. 6 ರಂದು ನೂತನ ಶನೇಶ್ವರ ಸ್ವಾಮಿ ದೇಗುಲ ಲೋಕಾರ್ಪಣೆ

# ಶ್ರೀಶನೇಶ್ವರ ಪ್ರಾಣ ಪ್ರತಿಷ್ಠಾಪನೆ, ಗೋಪುರ ಕಳಸಾರೋಹಣ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಐ.ಯು.ಡಿ.ಪಿ. ಲೇಔಟ್ ಮೇಲ್ಭಾಗ, ಸೂರ್ಯಪುತ್ರ ನಗರದಲ್ಲಿ ನೂತನವಾಗಿ ಶ್ರೀ ಶ್ರೀಶನೇಶ್ವರಸ್ವಾಮಿ ಲೋಕ ಕಲ್ಯಾಣ ಟ್ರಸ್ಟ್ ವತಿಯಿಂದ ನಿರ್ಮಾಣವಾಗಿರುವ ಶ್ರೀ ಶ್ರೀಶನೇಶ್ವರಸ್ವಾಮಿಯ ದೇಗುಲ ಲೋಕಾರ್ಪಣೆ ಏಪ್ರಿಲ್ 4 ಮತ್ತು 5 ಹಾಗೂ 6 ಶನಿವಾರದವರೆಗೆ ಮೂರು ದಿನಗಳ ವಿವಿಧ ಧಾರ್ಮಿಕ ಸಮಾರಂಭಗಳು ನಡೆಯಲಿದ್ದು ಶ್ರೀ ಶ್ರೀಶನೇಶ್ವರಸ್ವಾಮಿಯ ಪ್ರಾಣ ಪ್ರತಿಷ್ಠಾಪನೆ ಮತ್ತು ಗೋಪುರ ಕಳಸಾರೋಹಣ ಮಹೋತ್ಸವ ನಡೆಯಲಿದೆ ಎಂದು ಶ್ರೀ ಶ್ರೀಶನೇಶ್ವರಸ್ವಾಮಿ ಲೋಕ ಕಲ್ಯಾಣ ಟ್ರಸ್ಟ್‌ನ ಅಧ್ಯಕ್ಷರಾದ ಸಿ. ಶಂಕರಮೂರ್ತಿ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು. ಶ್ರೀ ಶ್ರೀಶನೇಶ್ವರಸ್ವಾಮಿ ಲೋಕ ಕಲ್ಯಾಣ ಟ್ರಸ್ಟ್ ಪೀಠಾಧಿಪತಿಗಳಾಗಿದ್ದ ಲಿಂಗೈಕ್ಯ ಮೋಹನ್ ಕುಮಾರ್ ಸ್ವಾಮೀಜಿ ಇವರ ಕೃಪಾಶೀರ್ವಾದೊಂದಿಗೆ ಸಮಾ



ರಂಭ ನಡೆಯಲಿದ್ದು, ಏ 4 ರಂದು ಗಣಪತಿ ಪೂಜೆ, ಪುಣ್ಯಾಹ, ದೇವ ನಾಂದಿ, ಪಂಚಗವ್ಯ, ರಕ್ಷಾಸೂತ್ರಧಾರಣೆ, ಜಲಾಧಿವಾಸ, ಕ್ಷಿರಾಧಿವಾಸ, ಧಾನ್ಯಾಧಿವಾಸ, ಮಂಗಳಾರತಿ ನಡೆಯಲಿದೆ. ಏಪ್ರಿಲ್ 5 ರ ಬೆಳಗ್ಗೆ 9.00 ಘಂಟೆಯಿಂದ ಕಲಶಸ್ಥಾಪನೆ, ನವಗ್ರಹ ಹೋಮ, ಮೃತ್ಯುಂಜಯ ಹೋಮ, ಗಣಪತಿ ಹೋಮ, ರುದ್ರ ಹೋಮ, ಶನೈಶ್ವರ ಹೋಮ, 12.30ಕ್ಕೆ ಪುರ್ಣಾಹುತಿ, ಮಹಾಮಂಗಳಾರತಿ ಸಂಜೆ 5.00 ಘಂಟೆಗೆ ವಾಸ್ತು ಹೋಮ, ರಾಕ್ಷೆಘ್ನ ಹೋಮ, ಬಲಿಪ್ರಧಾನ ರತ್ನಾಧಿವಾಸ, ಚಿತ್ರಪಟಾಧಿವಾಸ, ಫಲಾಧಿವಾಸ, ಶಯ್ಯಧಿವಾಸ ಅಷ್ಟಬಂಧನ ನಡೆಯಲಿದೆ ಎಂದರು.

6ರ ಶನಿವಾರ ಬೆಳಗ್ಗೆ 4.30 ರಿಂದ 4.55ಕ್ಕೆ ಸಲ್ಲುವ ಶುಭ ಮಕರ ಲಗ್ನದಲ್ಲಿ ಶ್ರೀ ಶನೈಶ್ವರಸ್ವಾಮಿಯವರ ಪ್ರತಿಷ್ಠಾಪನ ಕುಂಭಾಭಿಷೇಕ ದೇವತಾ ದರ್ಶನ ಮೂಹೂರ್ತ. ಮತ್ತು ಬೆಳಗ್ಗೆ 10.30 ರಿಂದ ಗೋಪುರ ಕಳಸ ಸ್ಥಾಪನೆಯನ್ನು ಬೆಲಗೂರಿನ ಶ್ರೀ ಹನುಮನ್ನದ್ದೂತ ಅವಧೂತರಾದ ಶ್ರೀ ಬಿಂಧುಮಾಧವ ಶರ್ಮಾ ಗುರುಗಳ ಶಿಷ್ಯರಾದ ಶ್ರೀ ವಿಜಯಮಾರುತಿ ಶರ್ಮಾ ಗುರುಗಳ ಅಮೃತಹಸ್ತದಿಂದಶ್ರೀಶ್ರೀಶನೈಶ್ವರಸ್ವಾಮಿಯ ಪ್ರತಿಷ್ಠಾಪನಾ ಮತ್ತು ಕಳಶರೋಹಣ ಕಾರ್ಯಕ್ರಮ ನೆರವೇರಲಿದೆ ಎಂದರು.

ಸಮಿತಿ ಉಪಾಧ್ಯಕ್ಷರಾದ ಎಂ.ಕೆ. ರಘುನಾಥ್ ಮಾತನಾಡಿ, ಗೋಪುರಕಳಸ ಸ್ಥಾಪನೆ ನಂತರ ಅಭಿಷೇಕ ಭಕ್ತರಿಂದ ತತ್ವನ್ಯಾಸಾದಿ ಕಲಾಹೋಮ, ಶನೈಶ್ವರ ಮೂಲಮಂತ್ರ ಹೋಮ, ಮಹಾಪೂರ್ಣಹುತಿ ಕುಂಭಾಭಿಷೇಕ, ಪಂಚಾಮೃತ ಅಭಿಷೇಕ, ರುದ್ರಭಿಷೇಕ, ಮಂಗಳದ್ರವ್ಯಗಳ ಅಭಿಷೇಕ, ಅಲಂಕಾರ ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ಮಧ್ಯಾಹ್ನ 12.30 ಗಂಟೆಯಿಂದ ಅನ್ನ ಸಂತರ್ಪಣೆ ನಡೆಯಲಿದೆ ಎಂದರು.

ಕಾರ್ಯಕಾರಿ ಸಮಿತಿ ಸಹ ಕಾರ್ಯದರ್ಶಿ ಎಸ್.ಟಿ. ನವೀನ್ ಕುಮಾರ್ ಮಾತನಾಡಿ, ಆರು ಮುಕ್ಕಾಲು ಅಡಿ ಎತ್ತರದ ಏಕ ಶಿಲೆಯಲ್ಲಿ ಶನಿದೇವರ ಮೂರ್ತಿಯನ್ನು ಕೆತ್ತಲಾಗಿದೆ, ದಾನವಾಗಿ ಬಂದಂತಹ 90*60 ಅಳತೆಯ ಜಾಗದಲ್ಲಿ 9 ದೇವಾಲಯಗಳನ್ನು ನಿರ್ಮಾಣ ಮಾಡಬೇಕೆಂದು ಕೆಲಸವನ್ನು ಮಾಡಲಾಗುತ್ತಿದೆ. ಕಳೆದ 16 ವರ್ಷದಿಂದ ದೇವಾಲಯದ ಕೆಲಸವನ್ನು ಮಾಡಲಾಗುತ್ತಿದೆ.

ಈ ಕಾರ್ಯಕ್ರಮದ ದಿನದಲ್ಲಿ 3 ರಿಂದ 5 ಸಾವಿರ ಜನ ಬರುವ ನೀರೀಕ್ಷೆ ಇದೆ ಸಮಸ್ತ ಭಕ್ತಾದಿಗಳು ಶ್ರೀಸ್ವಾಮಿಯ ಪ್ರಾಣ ಪ್ರತಿಷ್ಠಾಪನೆ ಮತ್ತು ಗೋಪುರ ಕಳಸಾರೋಣ ಪೂಜಾ ಕಾರ್ಯಕ್ರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದುಮನವಿ ಮಾಡಿದರು. ಕಾರ್ಯಕಾರಿ ಸಮಿತಿ ಮಾಸ್ಟರ್, ಗೋಪಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಅಬಕಾರಿ ಇಲಾಖೆ ಅಧಿಕಾರಿಗಳ ದಾಳಿ: ಅಕ್ರಮ ಮದ್ಯ ಸಾಗಾಟ 2 ಪ್ರಕರಣ ದಾಖಲು



» ಚಳ್ಳಕೆರೆ

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಅಕ್ರಮ ಮದ್ಯ ಮಾರಾಟವನ್ನು ಸಂಪೂರ್ಣವಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ನಿರಂತರ ದಾಳಿ ನಡೆಸುತ್ತಿದ್ದು, ಬುಧವಾರ ಬೆಳಗೆನಿಂದ ಸಂಜೆವರೆಗೆ ಚಳ್ಳಕೆರೆ ತಾಲ್ಲೂಕು ಸೇರಿದಂತೆ ಇತರೆಡೆ ಮಿಂಚಿನ ದಾಳಿ ನಡೆಸಿ ಅಕ್ರಮ ಮದ್ಯ, ಸಾಗಾಟಕ್ಕೆ ಉಪಯೋಗಿಸಿದ ವಾಹನ ಹಾಗೂ ಆರೋಪಿಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ. ಜಿಲ್ಲಾ ಅಬಕಾರಿ ಉಪ ಆಯುಕ್ತ ನಿರ್ದೇಶನ, ಹಿರಿಯೂರು ಉಪವಿಭಾಗದ ಅಬಕಾರಿ ಉಪಾಧೀಕ್ಷಕರ ಮತ್ತು ಚಳ್ಳಕೆರೆ ಅಬಕಾರಿ ನಿರೀಕ್ಷಕ ಜಂಟಿ ಕಾರ್ಯಚರಣೆಯಲ್ಲಿ ಅಬಕಾರಿ ಉಪನಿರೀಕ್ಷಕ ಹಾಗೂ ಸಿಬ್ಬಂದಿ ವರ್ಗ ಈ ದಾಳಿಯಲ್ಲಿ ಭಾಗವಹಿಸಿ ವಿಶೇಷ ಕಾರ್ಯಚರಣೆ ನಡೆಸಿದ್ಧಾರೆ. ನಗರದ ಬೆಂಗಳೂರು ರಸ್ತೆಯ ಎಪಿಎಂಸಿ ಮಾರುಕಟ್ಟೆ ಬಳಿ ಹಿರೋಫ್ಯಾಷನ್ ದ್ವಿಚಕ್ರವಾಹನದಲ್ಲಿ ಸುಮಾರು 7380 ಲೀಟರ್ ಅಕ್ರಮ ಮದ್ಯ ಸಾಗಾಟ ಮಾಡುತ್ತಿದ್ದ ದೊಡ್ಡೇರಿಯ ಟಿ.ದಯಾನಂದ ಎಂಬುವನನ್ನು ವಶಕ್ಕೆ ಪಡೆದು 3280 ಮೌಲ್ಯದ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ. ಬೆಂಗಳೂರು ರಸ್ತೆಯ ನಗರಂಗೆರೆ ಗ್ರಾಮದಕ್ಕೆ ಹೋಗುವ ತಿರುವಿನಲ್ಲಿ ಹಿರೋಪ್ಯಾಷನ್ ದ್ವಿಚಕ್ರ ವಾಹನದಲ್ಲಿ ದೇವರಮರಿಕುಂಟೆಯ ಜಯಣ್ಣ ಎಂಬುವವರು 3120ರೂ ಮೌಲ್ಯದ 7800 ಲೀಟರ್ ಮದ್ಯ ಸಾಗಾಟ ಮಾಡುತ್ತಿದ್ದು, ವಾಹನ ಸಮೇತ ಆತನನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದೆ. ಕಾರ್ಯಚರಣೆಯಲ್ಲಿ ಅಬಕಾರಿ ನಿರೀಕ್ಷಕ ಸಿ.ನಾಗರಾಜು, ಅಬಕಾರಿ ಉಪನಿರೀಕ್ಷಕರಾದ ಡಿ.ಟಿ.ತಿಪ್ಪಯ್ಯ, ರೇಖಾ, ಮುಖ್ಯಪೇದೆಗಳಾದ ನಾಗರಾಜು, ಸೋಮಶೇಖರ್, ಮಂಜುಳಾ ಭಾಗವಹಿಸಿದ್ದರು.

### ದೇಶಕ್ಕಾಗಿ ಬಿಜೆಪಿ ಗೆಲ್ಲಿಸಲು ಗೋವಿಂದ ಕಾರಜೋಳ ಕರೆ



» ಹೊಳಲ್ಕೆರೆ

ದೇಶದ ಭದ್ರತೆ, ಅಭಿವೃದ್ಧಿಗೆ ಮೋದಿಜೀಯನ್ನು 3ನೇ ಅವದಿಗೆ ಪ್ರಧಾನಿಯನ್ನಾಗಿ ಮಾಡಬೇಕು. ಈ ನಿಟ್ಟಿನಲ್ಲಿ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರಲು ಕಾರ್ಯಕರ್ತರು ಪ್ರತಿಯೊಂದು ಮನೆಗೆ ಬೇಟಿ ನೀಡಿ ಪಕ್ಷದ ಅಭ್ಯರ್ಥಿಗೆ ಮತ ಹಾಕಿಸಬೇಕೆಂದು ಮಾಜಿ ಡಿಸಿಎಂ. ಹಾಗೂ ಅಭ್ಯರ್ಥಿ ಗೋವಿಂದ ಕಾರಜೋಳ ತಿಳಿಸಿದರು. ಅವರು ಪಟ್ಟಣದ ಸ್ನೇಹ ಕಂರ್ಪಟ್‌ನಲ್ಲಿ ಬಿಜೆಪಿ ಪಕ್ಷದ ಕಾರ್ಯಕತರು ಬುಧವಾರ ಆಯೋಜಿಸಿದ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. 60 ವರ್ಷ ಕಾಂಗ್ರೆಸ್ ಪಕ್ಷದ ದೇಶದ ಆಡಳಿತ ನಡೆಸಿದೆ. ಪ್ರಧಾನಿ ಇಂದಿರಾಗಾಂಧಿ, ರಾಜೀವ್ ಗಾಂಧಿಯನ್ನು ಭಯೋತ್ಪದಕರು ಹತ್ಯೆ ಮಾಡಿದರು. ದೇಶ ಪ್ರಧಾನಿಗೆ ರಕ್ಷಣೆ ಇರಲಿಲ್ಲ. ದೇಶದಲ್ಲಿ ಉಗ್ರವಾದ ಬೆಳೆದು ನಿಂತಿತ್ತು. ಕಳೆದ ಹತ್ತು ವರ್ಷಗಳಿಂದ ಭಯೋತ್ಪದನೆಯನ್ನು ಹತ್ತಿಕ್ಕಲಾಗಿದೆ. ದೇಶವನ್ನು ಸಾಕಷ್ಟು ಆಭಿವೃದ್ಧಿ ಮಾಡಿದೆ. ವಿಶ್ವದಲ್ಲಿ ಭಾರತದ ಕೀರ್ತಿ ಹೆಚ್ಚಾಗಿದೆ. ಮೋದಿ ಜೀಯನ್ನು ಇನ್ನೋಮ್ಮೆ 3ನೇ ಭಾರಿ ಪ್ರಧಾನಿ ಮಾಡಬೇಕು. ದೇಶವನ್ನು ಪ್ರಗತಿ ಪಥದಲ್ಲಿ ಸಾಗಿಸಲು ಪ್ರತಿಯೊಬ್ಬರು ಹೋರಾಟದ ಮಾಡಿ ಮತಗಳನ್ನು ಬಿಜೆಪಿ ಪಕ್ಷಕ್ಕೆ ಹಾಕಿಸಬೇಕೆಂದರು.

ಕಾಂಗ್ರೆಸ್ ಪಕ್ಷದ ರಾಜ್ಯ ಸರಕಾರ ಎಲ್ಲಾ ಹಂತದಲ್ಲಿ ವಿಫಲವಾಗಿದೆ. 180 ತಾಲೂಕಿನಲ್ಲಿ ಕುಡಿಯುವ ನೀರಿಲ್ಲ. ಸರಕಾರ ಬಂದಿನಿಂದ ಅಭಿವೃದ್ಧಿ ಶೂನ್ಯವಾಗಿದೆ. ಗ್ಯಾರಂಟಿ ಎಷ್ಟೋ ಜನರಿಗೆ ಸಿಕ್ಕಿಲ್ಲ. ಸುಳ್ಳು ಹೇಳಿ ಸರಕಾರವನ್ನು ನಡೆಸುತ್ತಿದ್ದಾರೆ. ಬರದ ದವಡೆಯಲ್ಲಿ ಸಿಲುಕಿರುವ ರೈತರ ಸಂಕಷ್ಟಕ್ಕೆ ಸರಕಾರ ಬಂದಿಲ್ಲ. ಇಂತಂಹ ಸರಕಾರದಿಂದ ರಾಜ್ಯ ಕಲ್ಯಾಣ ಅಸಾಧ್ಯ ಎಂದರು. ಜಿಲ್ಲಾ ಖಂಚಾಚಿ ಎಸ್.ಆರ್.ಗಿರೀಶ್ ಮಾತನಾಡಿ, ದೇಶದಲ್ಲಿ ಬಿಜೆಪಿ ಪಕ್ಷ ಬಲಿಷ್ಟವಾಗಿ ಬೆಳೆದಿದೆ. ಸಂಸತ್ ಚುನಾವಣೆಯಲ್ಲಿ ಪಕ್ಷದ ಕಾರ್ಯಕರ್ತರು ಗೋವಿಂದ ಕಾರಜೋಳ ಗೆಲ್ಲಿಸಲು ಶ್ರಮಿಸಬೇಕೆಂದರು. ಪಟ್ಟಣ ಪಂಚಾಯ್ತಿ ಮಾಜಿ ಉಪಾಧ್ಯಕ್ಷ ಜಯಸಿಂಹ ಖಟ್ರೋತ್ ಮಾತನಾಡಿ, ಕ್ಷೇತ್ರದಲ್ಲಿರುವ ಬಿಜೆಪಿ ಕಾರ್ಯಕರ್ತರು ಕಳೆದ 30 ವರ್ಷಗಳಿಂದ ಪಕ್ಷವನ್ನು ಗೆಲ್ಲಿಸಿಕೊಂಡು ಬಂದಿದ್ದಾರೆ. ಹಿರಿಯ ಕಾರ್ಯಕರ್ತರ ಪರಿಶ್ರಮದಿಂದ ಪಕ್ಷ ಇವತ್ತು ಅಧಿಕಾರದಲ್ಲಿದೆ. ರವಿಂದ್ರನಾಥ, ಜೆ.ಮಲ್ಲಿಕಾರ್ಜುನಪ್ಪ, ಜಿ.ಎಂ.ಸಿದ್ದೇಶ್, ನಾರಾಯಣಸ್ವಾಮಿ ಇವರಿಗೆ ಕ್ಷೇತ್ರದಿಂದ ಬಹುಮತ ನೀಡಲು ಇಲ್ಲಿರುವ ಹಿರಿಯ ಬಿಜೆಪಿ ಕಾರ್ಯಕರ್ತರ ಪರಿಶ್ರಮವಿದೆ.

## ರಂಗವ್ವನಹಳ್ಳಿ ಇತರ ಗ್ರಾಮಗಳಲ್ಲಿ ಕುಡಿಯುವ ನೀರಿಗಾಗಿ ಪರದಾಟ

# ಜಲಾಶಯ ಸಮೀಪವಿದ್ರೂ, ನೀರಿಗೆ ಹಾಹಾಕಾರ

» ಪಿ.ಟಿ.ಸಿದ್ಧೇಶ್ ಲಕ್ಕಿಹಳ್ಳಿ

ಹೊಸದುರ್ಗ: ಏನಪ್ಪಾ ದೇವ್ರೇ ಇದು.. ಈ ಹಿಂದೆ 3 ವರ್ಷ ಮಳೆಗಾಲ ಹೋದ್ರು, ಇಂತಹ ಪರಿಸ್ಥಿತಿ ಬಂದಿರಲಿಲ್ಲ. ರಣ ಬಿಸಿಲಿಗೆ ಮನೆಯಿಂದ ಹೊರಗಡೆ ಹೋಗಲು ಆಗ್ತಿಲ್ಲ. ಇನ್ನೊಂದು ಕಡೆ ಕುಡಿಯಲು ನೀರು ಸಿಕ್ತಿಲ್ಲ. ಸಮೀಪದಲ್ಲಿ ವಿವಿಸಾಗರ ಜಲಾಶಯವಿದ್ದರೂ, ಕುಡಿಯುವ ನೀರಿಗಾಗಿ ಪರದಾಟ ನಡೆಸುವಂತಹ ಸ್ಥಿತಿ ಬಂದೊಂದಾಗಿದೆ. ದೇವ್ರೇ ಇಗಾದ್ರೆ, ಬದುಕೋದು ಹೇಗೆ ಎಂದು ರಂಗವ್ವನಹಳ್ಳಿ ಗ್ರಾಮದ ಜನರು ತಮ್ಮ ಅಳಲನ್ನು ತೋಡಿಕೊಂಡ ಪರಿ ಇದು.

ಹೌದು.. ವಿವಿಸಾಗರ ಜಲಾಶಯ ಸಮೀಪವಿದ್ದರೂ, ತಾಲೂಕಿನ ಲಕ್ಕಿಹಳ್ಳಿ, ಮಾದಿಹಳ್ಳಿ, ಮಾಡದಕೆರೆ, ರಂಗವ್ವನಹಳ್ಳಿ, ಹುಲ್ಲುಕಟ್ಟೆ ಹಾಗೂ ಇತರ ಗ್ರಾಮಗಳ ಜನರು ಕುಡಿಯುವ ನೀರಿಗಾಗಿ ಪರದಾಟ ನಡೆಸುವಂತಹ ಸ್ಥಿತಿ ಬಂದೊಂದಾಗಿದೆ. ದನ– ಕರುಗಳಿಗೆ ಕುಡಿಯಲು ನೀರಿಲ್ಲದೆ ಬದುಕುಳಿಯುವುದೇ ಕಷ್ಟ ಎನ್ನುವಂತಾಗಿದೆ. ಇನ್ನೂ ರೈತರು ಕೈಗೆ ಬಂದಿರುವತೋಟಗಳನ್ನುಉಳಿಸಿಕೊಳ್ಳಲು ಟ್ಯಾಂಕರ್ ಗಳ ಮೊರೆ ಹೋಗುತ್ತಿದ್ದಾರೆ. ಕೆಲವು ಗ್ರಾಮಗಳಲ್ಲಿ ದುಪ್ಪಟ್ಟು ಹಣ ಕೊಟ್ಟರೂ, ಟ್ಯಾಂಕರ್ ನೀರು ಕೂಡ ಸಿಗದೇ ರೈತರು ಹೈರಾಣಗಿದ್ದಾರೆ.ಕಳೆದ 2 ವರ್ಷಗಳ ಹಿಂದೆ ಅತಿವೃಷ್ಟಿಯಿಂದಾಗಿ ವಿವಿ ಸಾಗರ ಜಲಾಶಯದ ಹಿನ್ನೀರಿನ ಗ್ರಾಮಗಳ ರೈತರ ತೋಟಗಳಿಗೆ ನೀರು ನುಗ್ಗಿ, ಅಡಿಕೆ ಗಿಡಗಳು ಕೆಂಪೆರೆದು ಕೊಳೆತು ಹೋಗುವ ಹಂತಕ್ಕೆ ಬಂದಿದ್ದವು. 2 ವರ್ಷ ಕಳೆಯುವುದರೊಳಗಾಗಿ ಅನಾವೃಷ್ಟಿ ಉಂಟಾಗಿ ಅಂತರ್ಜಲ ಮಟ್ಟ ಕುಸಿತ ಕಂಡು ಬೋರ್ವೆಲ್ ಗಳಲ್ಲಿ ನೀರಿಲ್ಲದೆ ಅಡಿಕೆ ಹಾಗೂ ಇನ್ನಿತರ ಬೆಳೆಗಳು ಒಣಗಿ ನಿಲ್ಲುತ್ತಿವೆ. ಇಗಾದರೆ, ಕೃಷಿಯನ್ನೇ ನಂಬಿಕೊಂಡು ಬದುಕುತ್ತಿರುವ ರೈತರ ಪಾಡೇನು? ಉತ್ತಮ ಬೆಳೆ ಬೆಳೆಯಬೇಕೆಂಬ ನಿರೀಕ್ಷೆ ಇಟ್ಟುಕೊಂಡು ಬ್ಯಾಂಕುಗಳಲ್ಲಿ ಲಕ್ಷಗಟ್ಟಲೆ ಸಾಲತಂದು ಕೃಷಿ ಕಾರ್ಯಗಳಿಗೆ ಹಾಕಿದ್ದೇವೆ. ಬೆಳೆ ನಷ್ಟವಾದರೆ ಅದನ್ನು ಹಿಂದಿರುಗಿಸಿ ಕಟ್ಟುವುದು ಹೇಗೆ ಚಿಂತೆಯಾಗಿದೆ ಎಂದು ಲಕ್ಕಿಹಳ್ಳಿ ಗ್ರಾಮದ ರೈತ ವೇದಮೂರ್ತಿ ಬೇಸರ ವ್ಯಕ್ತಪಡಿಸಿದರು.



ಕಳೆದ 15 ದಿನಗಳಿಂದಲೂ ಊರಿನಲ್ಲಿ ಕುಡಿಯಲು ನೀರು ಸಿಗದೇ ಜನರು ನೀರಿಗಾಗಿ ಪರದಾಟ ನಡೆಸುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಸಮೀಪದಲ್ಲಿಯೇ ವಿವಿ ಸಾಗರ ಜಲಾಶಯವಿದ್ದರೂ ಹೊಸದುರ್ಗ ತಾಲೂಕಿನ ಜನರಿಗೆ ಸರಿಯಾದ ರೀತಿಯಲ್ಲಿ ಬಳಕೆಯಾಗುತ್ತಿಲ್ಲ. ಬೋರ್ವೆಲ್ ಗಳಲ್ಲಿ ನೀರು ಬತ್ತಿ ಹೋಗಿ ಸುತ್ತಮುತ್ತಲ ಗ್ರಾಮಗಳಲ್ಲಿ ತೋಟಗಳು ಒಣಗಿ ನಿಲ್ಲುತ್ತಿವೆ. ಕುಡಿಯ ನೀರಿನ ಸಮಸ್ಯೆಯಾದರೂ ತಪ್ಪಿಸಿ ಎಂದು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಗಮನಕ್ಕೆ ತಂದರು, ಇಲ್ಲಿಯವರೆಗೂ ಇತ್ತ ಗಮನಹರಿಸಿಲ್ಲ.

» ಧನಂಜಯ್ ರಂಗವ್ವನಹಳ್ಳಿ ಗ್ರಾಮದ ಯುವಕ.

ರಂಗವ್ವನಹಳ್ಳಿ ಗ್ರಾಮದಲ್ಲಿ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಬೋರ್ವೆಲ್ ಗಳಿಂದ ರಂಗವ್ವನಹಳ್ಳಿ ಲಂಬಾಣಿಹಟ್ಟಿ ಮತ್ತು ಭೋವಿಹಟ್ಟಿಗೆ ನೀರು ಕೊಡುತ್ತಿದ್ದೆವು. ಆದರೆ, ಒಂದು ತಿಂಗಳಿನಿಂದ ಅಂತರ್ಜಲ ಮಟ್ಟ ಕುಸಿದು ನೀರು ಬರದಾಗಿವೆ. ಅಂತಹ ಬೋರ್ವೆಲ್ ಗಳನ್ನು 2 ದಿನಗಳಲ್ಲಿ ಮತ್ತೆ ರಿಬೋರ್ ಮಾಡಿಸಲು ಕ್ರಮವಹಿಸಲಾಗಿದೆ. ಖಾಸಗಿ ಬೋರ್ವೆಲ್ ಒಂದರಿಂದ ಗ್ರಾಮದ ಜನರಿಗೆ ನೀರು ಕೊಡುವ ಕೆಲಸ ಮಾಡುತಿದ್ದೇವೆ. ರಿಬೋರ್ ಮಾಡಿದ ನಂತರ ನೀರು ಬರುವುದು ನೋಡಿಕೊಂಡು ಅಗತ್ಯವಿದ್ದರೆ, ಟ್ಯಾಂಕರ್ ನಿಂದ ನೀರು ಬಿಡುವ ಕೆಲಸ ಮಾಡುತ್ತೇವೆ.

» ಸುನಿಲ್ ಕುಮಾರ್
ಕಾರ್ಯನಿರ್ವಹಣಾಧಿಕಾರಿ
ತಾಲೂಕು ಪಂಚಾಯಿತಿ,
ಹೊಸದುರ್ಗ

## ಮತದಾನ ಜಾಥಾ: ಲೋಕಸಭಾ ಚುನಾವಣೆಯಲ್ಲಿ ಶೇ 90 ರಷ್ಟು ಮತದಾನಕ್ಕೆ ಗುರಿ; ಮಲ್ಲನಾಯ್ಕ್

» ದಾವಣಗೆರೆ



ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಚುನಾವಣೆ ನಡೆಯುತ್ತಿದ್ದು ಈ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ಶೇ.90 ಕ್ಕಿಂತಲೂ ಹೆಚ್ಚು ಮತದಾನವಾಗಬೇಕೆಂಬ ಗುರಿ ಹೊಂದಿ ಇದನ್ನು ತಲುಪಲು ಮತದಾರರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ ತಿಳಿಸಿದರು. ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಭಾವಸಾರ ವಿಷನ್ ಇಂಡಿಯಾ ವತಿಯಿಂದ ದಾವಣಗೆರೆ ನಗರದ ಜಯದೇವ ವೃತ್ತದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಮತದಾನ ಜಾಗೃತಿ ಅಂಗವಾಗಿ ಏರ್ಪಡಿಸಲಾದ ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ದೇಶವನ್ನು ಬದಲಾಯಿಸುವ ಶಕ್ತಿ ಮತದಾರರಲ್ಲಿದ್ದು, ಮತದಾರರು ಚುನಾವಣೆಯಲ್ಲಿ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ತಮ್ಮ ಸ್ಪಷ್ಟ ಅಭಿಪ್ರಾಯವನ್ನು ವ್ಯಕ್ತಪಡಿಸಬೇಕು. ಚುನಾವಣೆಯಲ್ಲಿ ಎಲ್ಲಾ ಮತದಾರರು ಮತ ಚಲಾಯಿಸಿದಲ್ಲಿ ಉತ್ತಮ ನಾಯಕರನ್ನು ಆಯ್ಕೆ ಮಾಡಲು ಸಹಕಾರಿಯಾಗಲಿದೆ ಎಂದರು. ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಗಾಯತ್ರಿ, ವಿವಿಧ ಇಲಾಖೆಯ ವಾರ್ಡ್‌ನ್‌ಗಳು, ಭಾವಸಾರ ಮಿಷನ್ ಇಂಡಿಯಾ ಅಧ್ಯಕ್ಷರಾದ ಸರಳ ಆಮ್ಟೆ, ಕಾರ್ಯದರ್ಶಿ ರಮೇಶ್ ಗುಜ್ಜಾರ್, ಉಪಾಧ್ಯಕ್ಷ ಅಶೋಕ್ ನವಾಲೆ, ರಮೇಶ್ ಅಂಬರ್‌ಕರ್, ಅರುಣ್ ಗುಜ್ಜಾರ್, ನಿಂಗೋಜಿರಾವ್ ಗುಜ್ಜಾರ್, ಆರ್ಥಿ ಗುಜ್ಜಾರ್, ರಮೇಶ್ ತೇಲ್ಕರ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಮತದಾನ ಜಾಗೃತಿ ಜಾಥವು ದಾವಣಗೆರೆ ನಗರದ ಜಯದೇವ ವೃತ್ತದಿಂದ ಪ್ರಾರಂಭವಾಗಿ ಅಂಬೇಡ್ಕರ್ ಸರ್ಕಲ್ ಮೂಲಕ ವಿದ್ಯಾರ್ಥಿ ಭವನ ಮಾರ್ಗವಾಗಿ ತೆರಳಿ ಗುಂಡಿಸರ್ಕಲ್ ತಲುಪಿತು.

## ದಾವಣಗೆರೆ: ಪೊಲೀಸ್ ಧ್ವಜ ದಿನಾಚರಣೆ



» ದಾವಣಗೆರೆ

ಸರ್ಕಾರದ ವಿವಿಧ ಇಲಾಖೆಗಳ ಸೇವೆಗಿಂತಲೂ ಪೊಲೀಸ್ ಇಲಾಖೆ ಸೇವೆ ಭಿನ್ನವಾಗಿರುತ್ತದೆ. ಕಾನೂನು ಸುವ್ಯವಸ್ಥೆಯಲ್ಲಿ ಜನಸಾಮಾನ್ಯರಿಗೆ ನೆರವಾಗುವ ಮೂಲಕ ಅವರ ಕಷ್ಟಗಳಲ್ಲಿ ಭಾಗಿಯಾಗಲಿದೆ. ಸಂಕಷ್ಟದಲ್ಲಿದ್ದಾಗ ಪೊಲೀಸ್ ಇಲಾಖೆ ತಕ್ಷಣ ಸ್ಪಂದಿಸಲಿದೆ ಎಂಬ ನಂಬಿಕೆ ಎಂದೂ ಉಸಿಯಾಗದಂತೆ ನಮ್ಮ ಸೇವೆ ನಿರಂತರವಾಗಿರಬೇಕೆಂದು ನಿವೃತ್ತ ಪೊಲೀಸ್ ಉಪನಿರೀಕ್ಷಕರಾದ ಸಿ.ಎನ್.ಬಸವರಾಜ್ ತಿಳಿಸಿದರು. ಅವರು ಮಂಗಳವಾರ ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ಬೇರೆ ಇಲಾಖೆಗಿಂತ ಪೊಲೀಸ್ ಇಲಾಖೆಯಲ್ಲಿ ಕೆಲಸ ಮಾಡುವುದು ಅತಿ ಮುಖ್ಯವಾಗಿರುತ್ತದೆ. ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಾನೂನು ಪಾಲನೆ, ಅನುಷ್ಠಾನದಲ್ಲಿ ನೇರವಾಗಿ ಭಾಗಿಯಾಗುವರು. ಸಾರ್ವಜನಿ ಕರೊಂದಿಗೆ ಹತ್ತಿರದ ಸಂಬಂಧವಿರುತ್ತದೆ. ಕಾನೂನು ಉಲ್ಲಂಘನೆಯಾದಾಗ ಜನಸಾಮಾನ್ಯರಿಗೆ ನೆರವಾಗುವ ಮೂಲಕ ರಕ್ಷಣೆಯನ್ನು ಒದಗಿಸುತ್ತಾರೆ ಎಂಬ ಅಪಾರವಾದ ನಂಬಿಕೆಯನ್ನು ಜನರು ಇಟ್ಟುಕೊಂಡಿರುತ್ತಾರೆ, ಪ್ರಾಮಾಣಿಕ ಸೇವೆ ಮಾಡುವ ಮೂಲಕ ಇಲಾಖೆ ಘನತೆ, ಗೌರವ ಹೆಚ್ಚು ಮಾಡೋಣ ಎಂದರು.

ಪೂರ್ವ ವಲಯ ಪೊಲೀಸ್ ಮಹಾನಿರೀಕ್ಷಕರಾದ ಡಾ; ಕೆ.ತ್ಯಾಗರಾಜನ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಪೊಲೀಸ್ ಧ್ವಜಗಳ ವಿತರಣೆ ಮಾಡಿದರು. ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ ಎ.2 ರಾಜ್ಯದಲ್ಲಿ ಪೊಲೀಸ್ ಕಾಯ್ದೆ ತಂದಂತಹ ದಿನ, 1965 ರಿಂದ ಇಲ್ಲಿಯವರೆಗೂ ಕರ್ನಾಟಕ ರಾಜ್ಯ ಪೊಲೀಸ್ ಧ್ವಜ ದಿನಾಚರಣೆಯಾಗಿ ಆಚರಿಸುತ್ತಾ ಬರಲಾಗಿದೆ.

## ನೀತಿ ಸಂಹಿತೆ ಉಲ್ಲಂಘನೆ: ರೂ.1.41 ಕೋಟಿ ಮೌಲ್ಯದ ನಗದು, ಮದ್ಯ, ವಶ

» ದಾವಣಗೆರೆ

ಲೋಕಸಭಾ ಚುನಾವಣೆ ನಡೆಯುತ್ತಿದ್ದು ಮಾರ್ಚ್ 16 ರಿಂದ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಮಾರ್ಚ್ 16 ರಿಂದ ಏಪ್ರಿಲ್ 3 ರ ವರೆಗೆ ಚುನಾವಣಾ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಡಿ ಕ್ರಮ ಕೈಗೊಳ್ಳಲಾಗಿದ್ದು ಜಿಲ್ಲೆಯಲ್ಲಿ ಇದುವರೆಗೆ ರೂ.1,41,91,569 ಮೌಲ್ಯದಷ್ಟು ನಗದು, ವಿವಿಧ ವಸ್ತುಗಳು ಹಾಗೂ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಚುನಾವಣಾ ಮಾದರಿ ನೀತಿ ಸಂಹಿತೆಯನ್ನು ಅನುಷ್ಠಾನ ಮಾಡಲು ಹದ್ದಿನ ಕಣ್ಣಿಡಲಾಗಿದೆ. 21 ಫ್ಲೈಯಿಂಗ್ ಸ್ಕ್ವಾಡ್‌ಗಳು, 32 ಚೆಕ್‌ಪೋಸ್ಟ್‌ಗಳಲ್ಲಿ 24*7 ಮಾದರಿಯಲ್ಲಿ ದಿನದ ಮೂರು ಪಾಳಿಯಲ್ಲಿ ಚುನಾವಣಾ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇದಲ್ಲದೇ 9 ಅಬಕಾರಿ ಜಾಗೃತ ದಳದವರು ಕಾರ್ಯನಿರ್ವಹಿಸುತ್ತಿದ್ದು ಆಯಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿಯು ಗಸ್ತು ನಡೆಸಲಾಗುತ್ತಿದೆ. ವಶಪಡಿಸಿಕೊಂಡ ನಗದು ಮೌಲ್ಯದಲ್ಲಿ ಎಫ್.ಎಸ್.ಟಿ.ಯಿಂದ ರೂ.75,62,100 ಗಳನ್ನು ವಶಕ್ಕೆ ಪಡೆದು ಪರಿಶೀಲನೆಗೆ ಆದಾಯ ತೆರಿಗೆ ಇಲಾಖೆಗೆ ಒಪ್ಪಿಸಲಾಗಿದೆ. ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ಮಾಡಿದಾಗ ದಾಖಲೆ ಇಲ್ಲದೇ ನಗದು ಕೊಂಡೊಯ್ಯುತ್ತಿದ್ದ ವೇಳೆ 51,86,023 ರೂ.ಗಳನ್ನು ವಶಕ್ಕೆ ಪಡೆಯಲಾಗಿದೆ.

## ಪ್ರಮುಖ ಸುದ್ದಿ

# ಅಭಿವೃದ್ಧಿ ಮರೆತ ಕಾಂಗ್ರೆಸ್; ಬಿಜೆಪಿ ಅಭ್ಯರ್ಥಿ ಗಾಯಿತ್ರಿ ವಾಗ್ದಾಳಿ

» ದಾವಣಗೆರೆ





ಕಾಂಗ್ರೆಸ್ ಸರ್ಕಾರ ಪುಕ್ಕಟೆ ಭರವಸೆ ನೀಡಿ ಅಧಿಕಾರಕ್ಕೆ ಬಂದು ಅಭಿವೃದ್ಧಿ ಎಂಬುದನ್ನೆ ಮರೆತಿದೆ. ಗ್ಯಾರಂಟಿ ಕೊಡುತ್ತೇವೆ ಎಂಬ ನೆಪದಲ್ಲಿ 10 ತಿಂಗಳಿನಿಂದ ನಮ್ಮ ಜಿಲ್ಲೆ ಸೇರಿದಂತೆ ಇಡೀ ರಾಜ್ಯದಲ್ಲೇ ಅಭಿವೃದ್ಧಿ ಕೆಲಸಗಳು ಸ್ಥಗಿತಗೊಂಡಿವೆ ಎಂದು ಬಿಜೆಪಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ್ ತಿಳಿಸಿದರು.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ತೆರದ ವಾಹನದಲ್ಲಿ ಮತ್ತು ಕೀ ವೋಟರ್ಸ್ ಮನೆಗಳಿಗೆ ತೆರಳಿ ಮತಬೇಟೆ ಮಾಡಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಗ್ಯಾರಂಟಿ ಹೆಸರಿನಲ್ಲಿ ಅಧಿಕಾರಕ್ಕೆ ಬಂದು ಅನ್ ಗ್ಯಾರಂಟಿ ಸರ್ಕಾರ ನಡೆಸುತ್ತಿದ್ದಾರೆ. ಸ್ವಪಕ್ಷೀಯ ಶಾಸಕರೇ ಅಭಿವೃದ್ಧಿಗೆ ಹಣವಿಲ್ಲ ಎಂದು ಬೊಬ್ಬೆ ಹೊಡೆಯುತ್ತಿದ್ದಾರೆ. ಕೇಂದ್ರದಲ್ಲಿ ಮೋದಿ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಕೊಟ್ಟ ಮಾತಿನಂತೆ ನಡೆದುಕೊಂಡು ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುತ್ತಿದ್ದಾರೆ ಎಂದರು.

ದೇಶದ ಅಭಿವೃದ್ಧಿ, ಸುರಕ್ಷತೆ, ಸಾಕ್ಷಾರತೆ, ಹೆಣ್ಣು ಮಕ್ಕಳ ರಕ್ಷಣೆಗಾಗಿ ಕೇಂದ್ರದಲ್ಲಿ ಮತ್ತೊಮ್ಮೆ ನರೇಂದ್ರ ಮೋದಿ ಅವರು ಅಧಿಕಾರಕ್ಕೆ ಬರಬೇಕು. ನರೇಂದ್ರ ಮೋದಿ ಅವರು ಅಧಿಕಾರಕ್ಕೆ ಬರಬೇಕು ಅಂದರೆ ದಾವಣಗೆರೆಯಿಂದ ನೀವು ನನ್ನನ್ನು ಆಯ್ಕೆ ಮಾಡಿ ದೆಹಲಿಗೆ ಕಳುಹಿಸಬೇಕು ಎಂದರು.

ದಾವಣಗೆರೆ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶ್ರೀಮತಿ ಗಾಯಿತ್ರಿ ಸಿದ್ಧೇಶ್ವರ್ ಅವರು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಭರ್ಜರಿ ಮತಬೇಟೆ ನಡೆಸಿದರು. ನಗರ ದೇವತೆ ದುರ್ಗಾಂಬಿಕಾ ದೇವಿ ಹಾಗೂ ವೀರಭದ್ರೇಶ್ವರ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿ, ದೇವರ ದರ್ಶನ ಪಡೆದು ಪ್ರಚಾರ ಕಾರ್ಯಕ್ಕೆ ಚಾಲನೆ ನೀಡಿದರು.ಹಳೇ ಪೇಟೆ ಮತ್ತು ಜಾಲಿ ನಗರ ವ್ಯಾಪ್ತಿಯಲ್ಲಿ ಮತಯಾಚನೆ ಮಾಡಿ, ಕೀ ವೋಟರ್ಸ್ ಮನೆಗಳಿಗೆ ತೆರಳಿ ತಮಗೆ ಮತ ಹಾಕುವಂತೆ ಕೇಳಿದರು. ರೈಸ್ ಮಿಲ್ ಮಾಲೀಕರಾದ ಲೋಹಿತ್ ಪ್ರಿಯದರ್ಶಿ, ಮುಖಂಡರಾದ ಅಡವೆಪ್ಪ, ಮಾಗಿ ಜಯಪ್ರಕಾಶ್, ಪ್ರವೀಣ್, ಜಿ.ಕೃಷ್ಣೋಜಿ ರಾವ್, ಜವಳಿ ಜಯ ಪ್ರಕಾಶ್ ನಿವಾಸಕ್ಕೆ ಭೇಟಿ ನೀಡಿ ಉಭಯ ಕುಶಲೋಪರಿ ವಿಚಾರಿಸಿ ಮತಯಾಚಿಸಿದರು.

ಸವಿತಾ ಸಮಾಜದ ಸಭಾ ಭವನದಲ್ಲಿ ಮುಖಂಡರ ಸಭೆ ನಡೆಸಿ, ಬಿಜೆಪಿ ಯಾವಾಗಲೂ ತಮ್ಮ ಜೊತೆ ನಿಲ್ಲುತ್ತದೆ ಎಂಬ ಅಭಯ ನೀಡಿದರು. ನಿಮಿಷಾಂಬ ಸಮಾಜದ ಬಂಧುಗಳ ಜೊತೆ ಮಾತು ಕತೆ ನಡೆಸಿದರು. ಸಂಜೆ 5 ಗಂಟೆಯಿಂದ ವಾರ್ಡ್ ನಂ 45 ರ ಎರಗುಂಟೆ, ಕರೂರು, ಎಸ್.ಜೆ.ಎಂ ನಗರದಲ್ಲಿ ಮತಬೇಟೆ ನಡೆಸಿದರು.

ದೂಡ ಮಾಜಿ ಅಧ್ಯಕ್ಷ ಯಶವಂತರಾವ್ ಜಾಧವ್, ಎಸ್ಟಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ಶ್ರೀನಿವಾಸ ದಾಸ್ ಕರಿಯಪ್ಪ, ಒಬಿಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ರಾಜನಹಳ್ಳಿ ಶಿವಕುಮಾರ್, ಮಾಜಿ ಮೇಯರ್ ಬಿ.ಜಿ.ಅಜಯ್ ಕುಮಾರ್, ಜಿ.ಎಸ್.ಅಶ್ವಿನಿ, ಮಹಿಳಾ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭಾಗ್ಯಮ್ಮ, ಕೋಳೇನಳ್ಳಿ ಸತೀಶ್, ಸೋಗಿ ಶಾಂತಕುಮಾರ್, ಜಯಮ್ಮ, ಪ್ರೇಮಮ್ಮ ಮತ್ತಿತರರು ಇದ್ದರು.

## ಫಾಸ್ಟ್ ನ್ಯೂಸ್

### ಮಲೆಬೆನ್ನೂರಿನಲ್ಲಿ ಪಾನಿಪುರಿ ಸೇವನೆಯಿಂದ ಹಲವು ಮಕ್ಕಳಿಗೆ ವಾಂತಿ, ಬೇದಿ, ಜ್ವರ

» ದಾವಣಗೆರೆ

ಮಲೆಬೆನ್ನೂರು ಪಟ್ಟಣದಲ್ಲಿ ವಿಷಪೂರಿತ ಹಾಗೂ ಅಸುರಕ್ಷತೆಯಿಂದ ತಯಾರಿಸಿದ ಪಾನಿಪುರಿ ಸೇವನೆಯಿಂದ ಹಲವಾರು ಮಕ್ಕಳಿಗೆ ವಾಂತಿ, ಬೇದಿ ಹಾಗೂ ಜ್ವರ ಕಂಡು ಬಂದಿದ್ದು ಅಸುರಕ್ಷಿತಯಿಂದತಯಾರಿಸಿದಹಾಗೂಕಲಬೆರಕೆ ಆಹಾರ ತಯಾರಿಕೆಯನ್ನು ನಿಷೇಧಿಸಲಾಗಿದೆ. ಪುರಸಭಾ ವ್ಯಾಪ್ತಿಯಲ್ಲಿನ ಹೋಟೆಲ್, ಬೀದಿ ಬದಿ ಹೋಟೆಲ್, ಬೇಕರಿ ಹಾಗೂ ಇತರೆ ಅಹಾರ ತಯಾರಿಸಿ ಮಾರಾಟ ಮಾಡುವವರು ಆಹಾರ ಮತ್ತು ಗುಣಮಟ್ಟ ಕಾಯಿದೆ ಅನ್ವಯ ನಿಯಮಗಳ ಪಾಲನೆ ಮಾಡದಿದ್ದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತದೆ. ಮತ್ತು ಹೋಟೆಲ್ ಮಾಡುವವರು ಕಾಯಿದೆಯನ್ವಯ ಪರವಾನಗಿ ಪಡೆದುಕೊಳ್ಳಬೇಕೆಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರೈಲ್ವೆ ನಿಲ್ದಾಣದಲ್ಲಿ ರಂಗೋಲಿಯಲ್ಲಿ ಅರಳಲಿದೆ ಮತದಾನ ಜಾಗೃತಿ

» ದಾವಣಗೆರೆ

ಲೋಕಸಭಾ ಚುನಾವಣಾ ಅಂಗವಾಗಿ ಸ್ವೀಪ್ ಸಮಿತಿಯಿಂದ ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಏಪ್ರಿಲ್ 4 ರಂದು ಬೆಳಗ್ಗೆ 10 ಗಂಟೆಗೆ ದಾವಣಗೆರೆ ರೈಲ್ವೆ ನಿಲ್ದಾಣದ ಆವರಣದಲ್ಲಿ ವಿದ್ಯಾರ್ಥಿಗಳಿಂದ ರಂಗೋಲಿ ಬಿಡಿಸುವ ಮೂಲಕ ಮತದಾನ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ತಿಳಿಸಿದ್ದಾರೆ.

# ಪತ್ರ ಬರೆದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ



ಕಾಂಗ್ರೆಸ್ ಪಕ್ಷದ ನಿಷ್ಠವಂತರೇ, ಕ್ಷೇತ್ರದ ಪ್ರಬುದ್ಧ ಮತದಾರರೇ ಏಪ್ರಿಲ್ 4, ಗುರುವಾರ ಬೆಳಗ್ಗೆ ತಮ್ಮಗಳ ಸಮ್ಮುಖದಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಚಿತ್ರದುರ್ಗ ಡಿಸಿ ಕಚೇರಿಯಲ್ಲಿ ಚುನಾವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಲಿದ್ದೇನೆ ಎಂದು ಬಿಎನ್. ಚಂದ್ರಪ್ಪ ತಿಳಿಸಿದ್ದಾರೆ.

ಈ ಸಂದರ್ಭ ತಮ್ಮಗಳ ಉಪಸ್ಥಿತಿ ನನಗೆ ಆನೆಬಲ ತಂದುಕೊಡಲಿದೆ ಎಂಬುದು ನನ್ನ ಅಚಲ ನಂಬಿಕೆ. ಆದ್ದರಿಂದ ತಾವುಗಳು ತಮ್ಮ ಸ್ನೇಹಿತರ ಜೊತೆ ಅಂದು ನಾಮಪತ್ರ ಸಲ್ಲಿಕೆ ಸಂದರ್ಭ ನನ್ನೊಂದಿಗೆ ಇರಬೇಕೆಂಬುದು ನನ್ನ ಮಹದಾಸೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಪರ ಬಹುದೊಡ್ಡ ಅಲೆ ಬೀಸುತ್ತಿರುವ ಸಂದರ್ಭ ನಿಮ್ಮಗಳ ಪ್ರೀತಿ, ಅಭಿಮಾನದ ಫಲ ನನ್ನನ್ನು ಕ್ಷೇತ್ರದ ಅಭ್ಯರ್ಥಿಯನ್ನಾಗಿ ಪಕ್ಷ ಘೋಷಣೆ ಮಾಡಿದೆ. ಇದು ನನ್ನ ಸೌಭಾಗ್ಯ ಎಂದಿದ್ದಾರೆ. ದೇಶದಲ್ಲಿಯೇ ಕರ್ನಾಟಕ ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಮಾದರಿ ಆಗಿವೆ. ಟೀಕೆ ಮಾಡಿದವರೇ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲು ಉತ್ಸಾಹ ತೋರುತ್ತಿದ್ದಾರೆ. ಅಷ್ಟರಮಟ್ಟಿಗೆ ಬಡವರ ಪರ ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಿದ ಯೋಜನೆಗಳು ದೇಶದ ಜನರ ಮೆಚ್ಚುಗೆ ಗಳಿಸಿವೆ. ಪ್ರತಿಪಕ್ಷಗಳ ನಿದ್ದೆಗೆಡಿಸಿವೆ ಎಂದು ತಿಳಿಸಿದ್ದಾರೆ ಗೃಹಲಕ್ಷ್ಮೀ, ಗೃಹಜ್ಯೋತಿ, ಸ್ತ್ರೀಶಕ್ತಿ, ಯುವನಿಧಿ, ಅನ್ನಭಾಗ್ಯ ಯೋಜನೆಗಳ ಜೊತೆಗೆ ಹಸಿದವರು, ಶ್ರಮಿಕರ ಹೊಟ್ಟೆ ತುಂಬಿಸುವ ಇಂದಿರಾ ಕ್ಯಾಂಟೀನ್ ಹೀಗೆ ಅನೇಕ ಕಾರ್ಯಕ್ರಮಗಳು ಜನರ ಮನಗೆದ್ದಿವೆ ಎಂದು ತಿಳಿಸಿದ್ದಾರೆ.

ನಾಡಿನ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷದ ಆಡಳಿತ ಅಗತ್ಯ ಎಂಬ ವಾತಾವರಣ ನಿರ್ಮಾಣ ಆಗಿದೆ. ಕೇಂದ್ರದಲ್ಲೂ ಕಾಂಗ್ರೆಸ್ ಸರ್ಕಾರವನ್ನು ಪ್ರತಿಷ್ಠಾಪಿಸಬೇಕೆಂಬ ಜನರ ಇಚ್ಛೆ ದಟ್ಟವಾಗಿರುವ ಸಂದರ್ಭ ನನ್ನನ್ನು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯನ್ನಾಗಿ ಪಕ್ಷ ಘೋಷಣೆ ಮಾಡಿರುವುದು ನನ್ನ ಸೌಭಾಗ್ಯ ಎಂದು ಸಂತಸ ವ್ಯಕ್ತಪಡಿಸಿದ್ದಾರೆ. ಇಷ್ಟೇ ಅಲ್ಲದೇ ನಾನು ನಾಮಪತ್ರ ಸಲ್ಲಿಸುವ ಸಂದರ್ಭ ನಾಡಿನ ದೊರೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಒಕ್ಕಲಿಗ ಸಮುದಾಯದ ನಾಯಕ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಾಲ್ಮೀಕಿ ನಾಯಕ ಸಮುದಾಯದ ಸತೀಶ್ ಜಾರಕಿಹೊಳಿ, ಜಿಲ್ಲೆಯ ಸಚಿವರು, ಹಾಲಿ-ಮಾಜಿ ಶಾಸಕರು, ಹಿರಿಯ ರಾಜಕಾರಣಿಗಳು ಖುದ್ದಾಗಿ ಆಗಮಿಸುತ್ತಿರುವುದು ನನ್ನ ಪಾಲಿಗೆ ಸ್ಮರಣೀಯ ದಿನವಾಗಲಿದೆ ಎಂದಿದ್ದಾರೆ. ಇಂತಹ ಸಂದರ್ಭ ಕ್ಷೇತ್ರದ ಮತದಾರರಾದ ತಾವು ಹಾಗೂ ಪಕ್ಷದ ನಿಷ್ಠಾವಂತರಾದ ತಮ್ಮಗಳ ಉಪಸ್ಥಿತಿ ನನಗೆ ವೈಯಕ್ತಿಕವಾಗಿ ಹೆಚ್ಚು ಸಂತಸ ತರಲಿದೆ. ಆದ್ದರಿಂದ ಅಂದು ನಿಮ್ಮಗಳ ಆಗಮನ, ಉಪಸ್ಥಿತಿಯತ್ತವೇ ನನ್ನ ಗಮನ ಇರಲಿದೆ. ಅಂದು ನೀವು ಹೆಚ್ಚಿನ ಸಂಖ್ಯೆಯಲ್ಲಿ ಬಂದು ನನ್ನನ್ನು ಹಾರೈಸುತ್ತೀರಾ ಎಂಬ ನಂಬಿಕೆ ನನ್ನಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಅಂದಿನ ಮೆರವಣಿಗೆಯಲ್ಲಿ ನನ್ನ ಕೈಜೋಡಿಸಿದ ಕೈಗಳು (ನಮಸ್ಕಾರಗಳು) ನಿಮಗಾಗಿಯೇ ಎದುರು ನೋಡುತ್ತಿರುತ್ತವೆ. ದಯಮಾಡಿ ಏಪ್ರಿಲ್ 4ರಂದು ಚಿತ್ರದುರ್ಗದಲ್ಲಿ ನಾಮಪತ್ರ ಸಲ್ಲಿಸುವ ಸಂದರ್ಭ ನಿಮ್ಮಗಳ ಉಪಸ್ಥಿತಿ ನನಗೆ ಬಹಳ ಮುಖ್ಯ. ನಿಮ್ಮನ್ನೇ ನಾನು ಎದುರು ನೋಡುತ್ತಿರುತ್ತೇನೆ. ತಪ್ಪದೇ ಬನ್ನಿ. ಇದು ನನ್ನ ಪ್ರೀತಿಯ ಆಹ್ವಾನ ಎಂದು ಬಿ.ಎನ್.ಚಂದ್ರಪ್ಪ ತಿಳಿಸಿದ್ದಾರೆ.

# ದೊಡ್ಡೇರಿ : ಬಿಜೆಪಿ ಬೆಂಬಲಿತ ಗ್ರಾಮ ಪಂಚಾಯಿತಿ ಸದಸ್ಯರು ಕಾಂಗ್ರೆಸ್ ಸೇರ್ಪಡೆ

» ಚಳ್ಳಕೆರೆ

ಕಳೆದ ಸುಮಾರು 10 ತಿಂಗಳಿನಿಂದ ರಾಜ್ಯದ ಜನತೆಯ ಸಂಕಷ್ಟಕ್ಕೆ ಸ್ಪಂದಿಸುತ್ತಿರುವ ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರ ಆಡಳಿತವನ್ನು ಮೆಚ್ಚಿ ಗ್ರಾಮೀಣ ಪ್ರದೇಶದ ಹೆಚ್ಚು ಜನರು ಕಾಂಗ್ರೆಸ್ ಪಕ್ಷವನ್ನು ಸೇರ್ಪಡೆಯಾಗುತ್ತಿದ್ದು, ಇದು ಪಕ್ಷಕ್ಕೆ ಹೆಚ್ಚು ಬಲ ನೀಡಿದೆ ಎಂದು ಶಾಸಕ ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.



ಅವರು, ಬುಧವಾರ ತಾಲ್ಲೂಕಿನ ದೊಡ್ಡೇರಿ ಗ್ರಾಮದಲ್ಲಿ ಬಿಜೆಪಿ ಬೆಂಬಲಿತ ಗ್ರಾಮ ಪಂಚಾಯಿತಿ ಸದಸ್ಯರಾದ ಚಿತ್ರಲಿಂಗಪ್ಪ, ತಿಪ್ಪೇಸ್ವಾಮಿ ಸೇರಿದಂತೆ ಹಲವಾರು ಪ್ರಮುಖ ಬಿಜೆಪಿ ತೊರೆದು ಕಾಂಗ್ರೆಸ್ ಪಕ್ಷ ಸೇರ್ಪಡೆಯಾಗಿದ್ದು, ಅವರನ್ನು ಪಕ್ಷಕ್ಕೆ ಸ್ವಾಗತಿಸಿದರು.

ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಟಿ.ರವಿಕುಮಾರ್, ಗ್ರಾಮ ಪಂಚಾಯಿತಿ ಅಧ್ಯಕ್ಷ ವೆಂಕಟೇಶ್, ಅನ್ವರ್‌ಮಾಸ್ಟರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಜೆ.ಟಿ.ಶಶಿಧರ, ನಗರಸಭಾ ಸದಸ್ಯ ರಮೇಶ್‌ಗೌಡ ಮುಂತಾದವರು ಉಪಸ್ಥಿತರಿದ್ದರು.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T